ಇನ್ನಷ್ಟು ಸ್ಥಳೀಯ
ಸುದ್ದಿಗಳು
ಪುಟ 09ರಲ್ಲಿ

ಕನ್ನಡಪ್ರಭ
ಸೋಮವಾರ 4.05.2026

ರಸ್ತೆ ಬದಿ ವ್ಯಾಪಾರಿಗಳಿಗೆ ಕೊಡೆ (ಛತ್ರಿ) ವಿತರಿಸಿದ ಡಾ.ರಾಘವೇಂದ್ರ

• **ಕನ್ನಡಪ್ರಭ ವಾರ್ತೆ** ಶ್ರೀರಂಗಪಟ್ಟಣ

ಪಟ್ಟಣದ ರಸ್ತೆ ಬದಿ ವ್ಯಾಪಾರಿಗಳು, ಬಿಸಿಲಿನಲ್ಲಿ ನಿಂತು ಕೆಲಸ ಮಾಡುವವರ ಹಾಗೂ ನಿರಾಶ್ರಿತರು ಬಿಸಿಲಿನಿಂದ ರಕ್ಷಣೆ ಪಡೆಯುವ ಸಲುವಾಗಿ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಹಾಗೂ ಶೇಷಾದ್ರಿಪುರಂ ಇಂಜಿನಿಯರಿಂಗ್ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಡಾ.ರಾಘವೇಂದ್ರ ಕೊಡೆ ವಿತರಿಸಿ ಮಾನವೀಯತೆ ಮೆರೆದರು.

ಬಳಿಕ ಡಾ. ರಾಘವೇಂದ್ರ ಮಾತನಾಡಿ, ರಸ್ತೆ ಬದಿ ವ್ಯಾಪಾರಿಗಳು, ಸಂಚಾರಿ ಪೊಲೀಸರು ಮತ್ತು ಕಾರ್ಮಿಕರು ಬಿಸಿಲನ್ನು ಲೆಕ್ಕಿಸದ ಕೆಲಸ ಮಾಡುತ್ತಿದ್ದಾರೆ. ಇದರಿಂದ ಅವರು ಕಾಲಕ್ರಮೇಣ ಶಾಖದ ಒತ್ತಡ, ಬಿಸಿಲಿನ ಹೊಡೆತದ ಅಪಾಯಗಳನ್ನು ಎದುರಿಸಲಿದ್ದಾರೆ. ಹಾಗಾಗಿ ಅವರ ಆರೋಗ್ಯ ರಕ್ಷಿಸಲು, ಬೇಸಿಗೆಯ ಸುಡುವ ಬಿಸಿಲಿನಲ್ಲಿ ನೆರಳು ಅತ್ಯಗತ್ಯ ಎಂದು ಅರಿತು ಅವರಿಗೆ ಕೊಡೆ ವಿತರಿಸಲಾಯಿತು ಎಂದರು.

ಈ ವೇಳೆ ಗುರುಪ್ರಸಾದ್, ವಿಹಾನ್, ಆಧ್ಯಾನ್ ಸೇರಿದಂತೆ ಇತರರು ಇದ್ದರು.

ಗರಿಷ್ಠ 33 °C | ಕನಿಷ್ಠ 22 °C

ಸುದ್ದಿ ಸಿಂಚನ

ಜನರ ಸಮಸ್ಯೆ ಬಗೆಹರಿಸಲು ಜನಸ್ಪಂದನಾ ಸಭೆ ಸಹಕಾರಿ: ಡೀಸಿ ಲತಾಕುಮಾರಿ

ಹಾಸನ: ಜಿಲ್ಲಾಡಳಿತದಿಂದ ಪ್ರತಿ ತಿಂಗಳು 3ನೇ ಶನಿವಾರ ಹಾಗೂ ತಾಲೂಕು ಮಟ್ಟದಲ್ಲಿ ಪ್ರತಿ ತಿಂಗಳ ಮೊದಲ ಶನಿವಾರ ಜನಸ್ಪಂದನಾ ಕಾರ್ಯಕ್ರಮ ನಡೆಸಲಾಗುವುದು. ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಜನಸ್ಪಂದನಾ ಸಭೆ ಸಹಕಾರಿಯಾಗಿದೆ ಎಂದು ಜಿಲ್ಲಾಧಿಕಾರಿ ಲತಾಕುಮಾರಿ ಅವರು ತಿಳಿಸಿದ್ದಾರೆ. ಅರಕಲಗೂಡಿನಲ್ಲಿ ಶನಿವಾರ ಜನಸ್ಪಂದನಾ ಕಾರ್ಯಕ್ರಮ ನಡೆಸಿ ನಂತರ ಮಾತನಾಡಿದ ಅವರು, ವಿಧಾನಸಭಾ ಕ್ಷೇತ್ರಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜನಸ್ಪಂದನಾ ಕಾರ್ಯಕ್ರಮವನ್ನು ನಡೆಸಲಾಗುತ್ತದೆ, ಜಿಲ್ಲೆಯಲ್ಲಿ ಈಗಾಗಲೇ ಹಾಸನ, ಚನ್ನರಾಯಪಟ್ಟಣ, ಸಕಲೇಶಪುರ ಹಾಗೂ ಬೇಲೂರಿನಲ್ಲಿ ಜನಸ್ಪಂದನಾ ಕಾರ್ಯಕ್ರಮ ನಡೆದಿದೆ ಎಂದರು. ಈ ಕಾರ್ಯಕ್ರಮ ಜನರ ಸಮಸ್ಯೆಗಳನ್ನು ನಿವಾರಿಸಲು ಸಹಕಾರಿಯಾಗಿದೆ ಎಂದ ಅವರು, ಅರಕಲಗೂಡಿನ ಸಭೆಯಲ್ಲಿ 85 ಅರ್ಜಿಗಳು ಬಂದಿವೆ. ಸಾರ್ವಜನಿಕರಿಂದ ಅನೇಕ ಸಮಸ್ಯೆಗಳನ್ನು ಕುರಿತು ಅರ್ಜಿಗಳು ಸಲ್ಲಿಕೆಯಾಗಿದ್ದು, ರಸ್ತೆ, ಕೆರೆ, ಸ್ಮಶಾನ ಒತ್ತುವರಿ ಕುರಿತಂತೆ ಹಾಗೂ ಕಂದಾಯ ಇಲಾಖೆಗೆ ಸಂಬಂಧಿಸಿದ ಅರ್ಜಿಗಳು ಹೆಚ್ಚು ಸ್ವೀಕಾರವಾಗುತ್ತವೆ ಎಂದರು. ಕೆಲವು ಅರ್ಜಿಗಳ ವಿಲೇವಾರಿಗೆ ಸಮಯ ತೆಗೆದುಕೊಳ್ಳುತ್ತದೆ ಎಂದ ಅವರು, ಅರ್ಜಿದಾರರಿಗೆ ಗೊಂದಲವಾಗದಂತೆ ಯಾವ ಕಾರಣಕ್ಕೆ ಅರ್ಜಿಯನ್ನು ಪರಿಗಣಿಸಲು ಸಾಧ್ಯವಾಗುತ್ತಿಲ್ಲ ಎಂಬುದನ್ನು ಸಂಬಂಧಿಸಿದ ಅಧಿಕಾರಿಗಳು ಹಿಂಬರಹದಲ್ಲಿ ಸ್ಪಷ್ಟವಾದ ಕಾರಣವನ್ನು ಕಡ್ಡಾಯವಾಗಿ ತಿಳಿಸಬೇಕು ಎಂದು ಹೇಳಿದರು.

10, 11ಕ್ಕೆ ವಡ್ಡರಹಳ್ಳಿಯಲ್ಲಿ ವೀರಾಂಜನೇಯ ಸ್ವಾಮಿ ದೇಗುಲ ಲೋಕಾರ್ಪಣೆ

ಅರಕಲಗೂಡು: ತಾಲೂಕಿನ ದೊಡ್ಡಮಗ್ಗೆ ಹೋಬಳಿಯ ವಡ್ಡರಹಳ್ಳಿ ಗ್ರಾಮದಲ್ಲಿ ನೂತನ ಶ್ರೀ ವೀರಾಂಜನೇಯಸ್ವಾಮಿ ಹಾಗೂ ಶ್ರೀ ಮಾರಮ್ಮ ದೇವಿಯ ದೇವಾಲಯದ ಜೀರ್ಣೋದ್ಧಾರ, ಸ್ಥಿರಬಿಂಬ ಪ್ರತಿಷ್ಠಾಪನೆ ಮತ್ತು ವಿಮಾನ ಗೋಪುರ ಕಳಸ ಪ್ರತಿಷ್ಠಾಪನಾ ಮಹೋತ್ಸವವು ಮೇ 10 ಮತ್ತು 11ರಂದು ವಿಜೃಂಭಣೆಯಿಂದ ನಡೆಯಲಿದೆ. ಶ್ರೀ ವೀರಾಂಜನೇಯಸ್ವಾಮಿ ದೇವಸ್ಥಾನ ಅಭಿವೃದ್ಧಿ ಸಮಿತಿ ಹಾಗೂ ಗ್ರಾಮಸ್ಥರು ಈ ಕುರಿತು ಮಾಹಿತಿ ನೀಡಿದ್ದು, ಮೇ 10ರಂದು ಸಂಜೆ 5 ಗಂಟೆಗೆ ಗಣಪತಿ ಪೂಜೆ, ವಾಸ್ತುಹೋಮ, ಮಹಾಮಂಗಳಾರತಿ ಹಾಗೂ ತೀರ್ಥ ಪ್ರಸಾದ ವಿತರಣೆ ನಡೆಯಲಿದೆ. ಮೇ 11ರಂದು ಶುಭ ಬ್ರಾಹ್ಮೀ ಮುಹೂರ್ತದಲ್ಲಿ ದೇವತಾ ಪ್ರತಿಷ್ಠಾಪನೆ, ಪೂರ್ಣಕುಂಭ ಸ್ಥಾಪನೆ, ಮಹಾಮಂಗಳಾರತಿ ಹಾಗೂ ಮಹಾಪ್ರಸಾದ ವ್ಯವಸ್ಥೆ ಇರಲಿದೆ. ಅದೇ ದಿನ ಬೆಳಗ್ಗೆ 10.30ಕ್ಕೆ ಧಾರ್ಮಿಕ ಸಭೆ ನಡೆಯಲಿದ್ದು, ಸುತ್ತೂರು ಶ್ರೀಕ್ಷೇತ್ರದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಡಾ. ಶ್ರೀ ನಿರ್ಮಲಾನಂದನಾಥ ಮಹಾಸ್ವಾಮೀಜಿ, ಸಿದ್ಧಗಂಗಾ ಶ್ರೀಕ್ಷೇತ್ರದ ಶ್ರೀ ಸಿದ್ಧಲಿಂಗ ಮಹಾಸ್ವಾಮೀಜಿ ಸೇರಿ ಹಲವು ಮಠಾಧೀಶರು ದಿವ್ಯಸಾನ್ನಿಧ್ಯ ವಹಿಸಲಿದ್ದಾರೆ. ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಗೌರವಾನ್ವಿತ ಉಪಸ್ಥಿತಿ ವಹಿಸಲಿದ್ದು, ಮಾಜಿ ಸಚಿವ ಹಾಗೂ ಶಾಸಕ ಎ. ಮಂಜು ಅಧ್ಯಕ್ಷತೆ ವಹಿಸಲಿದ್ದಾರೆ. ವಿಪ ಸದಸ್ಯ ಸೂರಜ್ ರೇವಣ್ಣ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಜಲಾಶಯದ ಮಟ್ಟ

ಹೇಮಾವತಿ 03-05-2026

ಗರಿಷ್ಠ ಮಟ್ಟ	2922 (ಅಡಿಗಳು)
ಇಂದಿನ ಮಟ್ಟ	2895.76 ಅಡಿಗಳು
ಒಳಹರಿವು	00 44 ಕ್ಯುಸೆಕ್
ಹೊರ ಹರಿವು	0490 ಕ್ಯುಸೆಕ್



ಅರಕಲಗೂಡು ತಾಲೂಕಿನ ಬಸವನಹಳ್ಳಿಯಲ್ಲಿ ಬಿರುಗಾಳಿ, ಮಳೆಯಿಂದ ಹಾನಿಯಾಗಿರುವ ರೈತರ ಬಾಳೆ ಬೆಳೆ ಪ್ರದೇಶಕ್ಕೆ ಶನಿವಾರ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಬಾಗೂರು ಹೋಬಳಿಯ ಕಲ್ಲೇ ಸೋಮನಹಳ್ಳಿ ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸುಮಾರು ₹50 ಲಕ್ಷ ವೆಚ್ಚದ ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಶಾಸಕ ಸಿ.ಎನ್. ಬಾಲಕೃಷ್ಣ ಶನಿವಾರ ಭೂಮಿ ಪೂಜೆ ನೆರವೇರಿಸಿದರು.

ಐಟಿಐಗಳ ಆಧುನೀಕರಣಕ್ಕೆ ₹1386 ಕೋಟಿ ನೆರವು

ಇಂದಿನ ತಂತ್ರಜ್ಞಾನ ಯುಗದಲ್ಲಿ ಕೈಗಾರಿಕೆ ತರಬೇತಿ ಸಂಸ್ಥೆಗಳ ಪಾತ್ರ ಮಹತ್ವದ್ದು: ನಿರ್ದೇಶಕ ಚಿದಾನಂದ್ | ಹಾಸನ ಐಟಿಐನ 60ನೇ ಸಂಭ್ರಮ

• **ಕನ್ನಡಪ್ರಭ ವಾರ್ತೆ** ಹಾಸನ

ಇಂದಿನ ವೇಗದ ತಂತ್ರಜ್ಞಾನ ಯುಗದಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ವಿದ್ಯಾರ್ಥಿಗಳನ್ನು ಉದ್ಯೋಗೋನ್ಮುಖವಾಗಿ ರೂಪಿಸಲು ಸರ್ಕಾರ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದೆ ಎಂದು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ನಿರ್ದೇಶಕ ಎನ್.ಎಸ್. ಚಿದಾನಂದ್ ಹೇಳಿದರು.

ನಗರದ ಬಿ.ಎಂ. ರಸ್ತೆಯಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ)ಯ 60ನೇ ವಾರ್ಷಿಕೋತ್ಸವ ಸಂಭ್ರಮಾಚರಣೆ ಅಂಗವಾಗಿ ಗುರುವಂದನಾ ಕಾರ್ಯಕ್ರಮ ಹಾಗೂ ಹಳೆ ವಿದ್ಯಾರ್ಥಿಗಳ ಸಮ್ಮಿಲನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ತಂತ್ರಜ್ಞಾನದಲ್ಲಿ ಅಪಾರ ಬದಲಾವಣೆಗಳು ಕಂಡುಬರುತ್ತಿದ್ದು, ವಿದ್ಯಾರ್ಥಿಗಳು ಅದಕ್ಕೆ ತಕ್ಕಂತೆ ತಮ್ಮನ್ನು ತಾವು ಸಿದ್ಧಗೊಳಿಸಿಕೊಳ್ಳಬೇಕು. ಹಿಂದೆ ಐಟಿಐ ಎಂದರೆ ಕೇವಲ ಸಾಮಾನ್ಯ ತಾಂತ್ರಿಕ ಶಿಕ್ಷಣ ಸಂಸ್ಥೆ ಎಂಬ ಭಾವನೆ ಇತ್ತು, ಆದರೆ ಈಗ ಪರಿಸ್ಥಿತಿ ಸಂಪೂರ್ಣ ಬದಲಾಗಿದೆ, ಕೈಗಾರಿಕೆಗಳ ಅವಶ್ಯಕತೆಗೆ ತಕ್ಕಂತೆ ಹೊಸ ಯಂತ್ರೋಪಕರಣಗಳು, ಆಧುನಿಕ ತಂತ್ರಜ್ಞಾನ ಮತ್ತು ಉದ್ಯೋಗಾಧಾರಿತ ತರಬೇತಿ ವ್ಯವಸ್ಥೆಗಳನ್ನು ಅಳವಡಿಸಲಾಗುತ್ತಿದೆ ಎಂದು ಹೇಳಿದರು.

ಐಟಿಐಗಳಲ್ಲಿ ಹೊಸತನ ತರಲು ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್‌ನಿಂದ ₹1386 ಕೋಟಿ ಅನುದಾನ ಲಭ್ಯವಾಗಿದ್ದು, ಇದರ ಮೂಲಕ ರಾಜ್ಯದ ವಿವಿಧ ಐಟಿಐ ಸಂಸ್ಥೆಗಳಲ್ಲಿ ಆಧುನೀಕರಣ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದರು.



ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ (ಐಟಿಐ)ಯ 60ನೇ ವಾರ್ಷಿಕೋತ್ಸವ ಸಂಭ್ರಮಾಚರಣೆ ಅಂಗವಾಗಿ ಗುರುವಂದನಾ ಕಾರ್ಯಕ್ರಮ ಹಾಗೂ ಹಳೆ ವಿದ್ಯಾರ್ಥಿಗಳ ಸಮ್ಮಿಲನವನ್ನು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ನಿರ್ದೇಶಕ ಎನ್.ಎಸ್. ಚಿದಾನಂದ್ ಉದ್ಘಾಟಿಸಿದರು.

ಈ ಯೋಜನೆಯ ಮೂಲಕ ವಿದ್ಯಾರ್ಥಿಗಳಿಗೆ ಅಂತಾರಾಷ್ಟ್ರೀಯ ಮಟ್ಟದ ತಾಂತ್ರಿಕ ಶಿಕ್ಷಣ ನೀಡುವ ಉದ್ದೇಶ ಹೊಂದಲಾಗಿದೆ, ಇದಕ್ಕೂ ಹೊರತಾಗಿ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಹಾಗೂ ಖಾಸಗಿ ಕೈಗಾರಿಕಾ ಸಂಸ್ಥೆಗಳ ಸಹಭಾಗಿತ್ವದಲ್ಲಿ ಕ್ಲಸ್ಟರ್ ಆಧಾರಿತ ಅಭಿವೃದ್ಧಿ ಯೋಜನೆ ಜಾರಿಗೊಳಿಸಲಾಗುತ್ತಿದ್ದು, ಒಂದು ಕ್ಲಸ್ಟರ್‌ಸ್ಥಾಪನೆಗೆ ₹200 ರಿಂದ ₹240 ಕೋಟಿ ಹೂಡಿಕೆ ಮಾಡಲಾಗುತ್ತಿದೆ. ಈ ಮೂಲಕ ವಿದ್ಯಾರ್ಥಿಗಳಿಗೆ ತರಬೇತಿಯ ಜೊತೆಗೆ ನೇರ ಉದ್ಯೋಗಾವಕಾಶಗಳನ್ನೂ ಕಲ್ಪಿಸುವ ದಿಸೆಯಲ್ಲಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ವಿವರಿಸಿದರು.

ಹಿಂದೆ ಐಟಿಐಗಳು ಶೆಡ್‌ಗಳಲ್ಲಿ ನಡೆಯುತ್ತಿದ್ದವು. ಮೂಲಭೂತ ಸೌಲಭ್ಯಗಳೇ ಇಲ್ಲದ ಪರಿಸ್ಥಿತಿಯಲ್ಲೂ ವಿದ್ಯಾರ್ಥಿಗಳು ಕಲಿತು ದೊಡ್ಡ ಹುದ್ದೆಗಳಿಗೆ ಏರಿದ್ದರು, ಈಗ ಎಲ್ಲವೂ ಅಪ್‌ಡೇಟ್ ಆಗಿದೆ. ಅತ್ಯಾಧುನಿಕ ಪ್ರಯೋಗಾಲಯಗಳು, ಡಿಜಿಟಲ್ ತರಬೇತಿ ವ್ಯವಸ್ಥೆಗಳು, ನೂತನ ಯಂತ್ರೋಪಕರಣಗಳು ಹಾಗೂ ಗುಣಮಟ್ಟದ ಬೋಧನೆ ಮೂಲಕ ವಿದ್ಯಾರ್ಥಿಗಳ ಭವಿಷ್ಯವನ್ನು ಉತ್ತಮಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ಇತ್ತೀಚೆಗೆ ಮಕ್ಕಳನ್ನು ತುಂಬಾ ಸೌಕರ್ಯದಲ್ಲಿ ಬೆಳೆಸಲಾಗುತ್ತಿದೆ. ಉಗುರು ಮಣ್ಣಿಗೆ ತಾಕಬಾರದು ಎಂಬ ರೀತಿಯಲ್ಲಿ ಸಾಕುತ್ತಿದ್ದಾರೆ. ಆದರೆ ಜೀವನದಲ್ಲಿ ಶ್ರಮ, ಶಿಸ್ತು ಮತ್ತು ಹೊಣೆಗಾರಿಕೆ ಅಗತ್ಯವಾಗಿದೆ ಎಂದು ತಿಳಿಸಿ, ತಮ್ಮ ವಿದ್ಯಾರ್ಥಿ ಜೀವನವನ್ನು ನೆನಪಿಸಿಕೊಂಡ ಅವರು, ನಾವು ಶಿಕ್ಷಕರಿಂದ ಹೊಡೆತ ತಿನ್ನುತ್ತಾ ಓದುತ್ತಿದ್ದೆವು. ಆ ಶಿಸ್ತು ನಮ್ಮ ಬದುಕನ್ನು ಕಟ್ಟಿಕೊಟ್ಟಿತು. ಈಗ ಶಿಕ್ಷಕರು ಮಕ್ಕಳಿಗೆ ಸ್ವಲ್ಪ ಗದರಿಸಿದರೂ ಪೋಷಕರು ಗಲಾಟೆ ಮಾಡುತ್ತಾರೆ, ಮಕ್ಕಳಲ್ಲಿ ಶಿಸ್ತು ಮತ್ತು ಮೌಲ್ಯಗಳನ್ನು ಬೆಳೆಸುವುದು ಸಮಾಜದ ಜವಾಬ್ದಾರಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಐಟಿಐ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಕೆ.ಎಂ. ಶ್ರೀನಿವಾಸ್ ಮಾತನಾಡಿ, ಸಂಸ್ಥೆಯ 60 ವರ್ಷಗಳ ಪಯಣವನ್ನು ಸ್ಮರಿಸಿ, ಐಟಿಐ ಕಾಲೇಜಿನ ಸಾಧನೆಗಳನ್ನು ವಿವರಿಸಿದರು.

ನಮ್ಮ ಐಟಿಐ ಸಂಸ್ಥೆ ಯಾವುದೇ ವಿಷಯದಲ್ಲೂ ಕಡಿಮೆ ಇಲ್ಲ, ಇಲ್ಲಿ ಓದಿದ ಅನೇಕ ವಿದ್ಯಾರ್ಥಿಗಳು ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಕೆಲವರು ವಿದೇಶಗಳಲ್ಲಿ ಕೆಲಸ ಮಾಡುತ್ತಿದ್ದಾರೆ, ಐಟಿಐ ಶಿಕ್ಷಣದ ಮೌಲ್ಯವನ್ನು ಸಮಾಜಕ್ಕೆ ತಿಳಿಸುವ ಅಗತ್ಯತೆ ಇದೆ ಎಂದರು.

ಈ 60ನೇ ವರ್ಷದ ಸಂಭ್ರಮಾಚರಣೆ, ಹಳೆ ವಿದ್ಯಾರ್ಥಿಗಳ ಸಮ್ಮಿಲನ ಮತ್ತು ಗುರುವಂದನಾ ಕಾರ್ಯಕ್ರಮವನ್ನು ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲಾಗಿದ್ದು, ಹಳೆ ವಿದ್ಯಾರ್ಥಿಗಳೇ ಇದರ ಯಶಸ್ಸಿಗೆ ಪ್ರಮುಖ ಕಾರಣರಾಗಿದ್ದಾರೆ ಎಂದು ತಿಳಿಸಿದರು.

ಅವರ ಸಹಕಾರದಿಂದ ಸಂಸ್ಥೆಯ ಬೆಳವಣಿಗೆಗೆ ಹೊಸ ಉತ್ಸಾಹ ಸಿಕ್ಕಿದೆ, ಪ್ರತಿ ವರ್ಷವೂ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಿ ಹಳೆ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಪ್ರಸ್ತುತ ವಿದ್ಯಾರ್ಥಿಗಳ ನಡುವೆ ಉತ್ತಮ ಬಾಂಧವ್ಯ ಬೆಳೆಸಬೇಕು. ಇದು ಸಂಸ್ಥೆಯ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದು ಅವರು ಆಶಿಸಿದರು.

ಖ್ಯಾತ ಹಾಸ್ಯ ಕಲಾವಿದ ಮಿಮಿಕ್ರಿ ಗೋಪಿ ಅವರಿಂದ ವಿಶೇಷ ಮನರಂಜನಾ ಕಾರ್ಯಕ್ರಮ ನಡೆದು ಎಲ್ಲರ ಗಮನ ಸೆಳೆಯಿತು. ಗುರುವಂದನೆ ಕಾರ್ಯಕ್ರಮ ಗಮನ ಸೆಳೆಯಿತು.

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ಜಂಟಿ ನಿರ್ದೇಶಕ ಸ್ಪಾರ್ಕ್ ಮಳವಳ್ಳಿಯ ಬಿ.ಎಲ್. ಚಂದ್ರಶೇಖರ್, ಆಡಳಿತ ವಿಭಾಗದ ಜಂಟಿ ನಿರ್ದೇಶಕ ಎಚ್.ಪಿ. ಮಂಜುನಾಥ್, ಐಎಂಸಿ ಸರ್ಕಾರಿ ಕೈಗಾರಿಕ ತರಬೇತಿ ಸಂಸ್ಥೆ ಅಧ್ಯಕ್ಷ ಭಾಸ್ಕರ್, ಪ್ರಾಚಾರ್ಯ ಎಂ. ಪ್ರದೀಪ್, ಎ.ಎಸ್. ಸತೀಶ್, ಪ್ರಕಾಶ್ ಬಾಬು, ತೌಫಿಕ್ ಅಹಮದ್, ಉದ್ಯೋಗಾಧಿಕಾರಿ ವಿಜಯಲಕ್ಷ್ಮೀ, ತರಬೇತಿ ಅಧಿಕಾರಿ ಉಮೆ ಅಸ್ಮಾ, ಬಿ.ಎನ್. ಮಹೇಶ್, ಗೌರವಾಧ್ಯಕ್ಷ ಎಂ. ನವೀನ್ ಚಂದ್ರ, ಕಾರ್ಯದರ್ಶಿ ಸುದೀಪ್, ಖಜಾಂಚಿ ಎ.ಎನ್. ಪರಮೇಶ್, ಗೌರವ ಸಲಹೆಗಾರರು ಬಿ.ಎಸ್. ಗಿರಿಧರ ಮೂರ್ತಿ, ಟಿ. ಜಯರಾಂ, ಟಿ.ಪಿ. ನವೀನ್, ಸುರೇಶ್, ರಾಮಕೃಷ್ಣ, ಇತರರು ಉಪಸ್ಥಿತರಿದ್ದರು.

ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಬಿಜೆಪಿ ನಾಯಕರಿಂದ ನಮನ

• **ಕನ್ನಡಪ್ರಭವಾರ್ತೆ,** ಅರಸೀಕೆರೆ

ನಗರದಲ್ಲಿ ಇತ್ತೀಚೆಗೆ ಪ್ರತಿಷ್ಠಾಪಿಸಲಾದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಪ್ರತಿಮೆಗೆ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಗೌರವ ಸಮರ್ಪಣೆ ನಡೆಸಿ,ದೇಶಭಕ್ತಿ ಸಂದೇಶ ಸಾರಿದರು. ತಾಲೂಕು ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಪ್ರತಿಮೆಗೆ ಮಾಲಾರ್ಪಣೆ ಜತೆಗೆ ಪುಷ್ಪಾರ್ಚನೆ ಮಾಡುವ ಮೂಲಕ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಿದ್ದೇಶ್ ನಾಗೇಂದ್ರ, ವಿಶ್ವಗುರು ಬಸವಣ್ಣ,ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಹಾಗೂ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್‌ಅವರ ಪ್ರತಿಮೆಗಳನ್ನು ನಿರ್ಮಿಸುವುದರೊಂದಿಗೆ ಮಾತ್ರ ನಿಲ್ಲದೆ, ಅವರ ಆದರ್ಶಗಳು ಮತ್ತು ನಡೆನುಡಿಗಳನ್ನು ಅಳವಡಿಸಿಕೊಂಡಾಗಲೇ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಹೇಳಿದರು. ಜಿಲ್ಲಾ ಕಾರ್ಯದರ್ಶಿ ಪುರುಷೋತ್ತಮ್ ಮಾತನಾಡಿ, ಕಲ್ಪತರು ನಾಡು, ಸಿದ್ಧರ ಬೀಡು ಎಂದೇ ಪ್ರಸಿದ್ಧವಾದ ಅರಸೀಕೆರೆ ನಗರದ ವಿವಿಧ ಭಾಗಗಳಲ್ಲಿ ತಲೆ ಎತ್ತಿ ನಿಂತಿರುವ ಮಹನೀಯರ ಪ್ರತಿಮೆಗಳು ನಗರದ ಸೌಂದರ್ಯವನ್ನು ಹೆಚ್ಚಿಸುವುದರ ಜೊತೆಗೆ ಜನರಲ್ಲಿ ದೇಶಾಭಿಮಾನ ಬೆಳೆಸುವಲ್ಲಿ ಮಹತ್ವದ ಪಾತ್ರವಹಿಸುತ್ತಿವೆ ಎಂದು ಅಭಿಪ್ರಾಯಪಟ್ಟರು.



ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಗಿರೀಶ್, ಉಪಾಧ್ಯಕ್ಷ ಗಂಗಾಧರ್, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಅಮಿತ್, ಗ್ರಾಮಾಂತರ ಅಧ್ಯಕ್ಷ ಯತೀಶ್, ನಗರ ಮಂಡಲ ಅಧ್ಯಕ್ಷ ಅವಿನಾಶ್ ನಾಯ್ಡು, ಪ್ರಧಾನ ಕಾರ್ಯದರ್ಶಿಗಳಾದ ಕಿರಣ್, ಮಂಜು, ಸಿಂಧು ಶಿವರಾಜ್ ಸೇರಿದಂತೆ ಸ್ಥಳೀಯ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

ಕಲ್ಲೇ ಸೋಮನಹಳ್ಳಿ ಕಾಂಕ್ರೀಟ್ ರಸ್ತೆಗೆ ಬಾಲಕೃಷ್ಣ ಭೂಮಿ ಪೂಜೆ

ಬಾಗೂರು (ನುಗ್ಗೇಹಳ್ಳಿ): ಹೋಬಳಿಯ ಕಲ್ಲೇ ಸೋಮನಹಳ್ಳಿ ಗ್ರಾಮದ ಪರಿಶಿಷ್ಟ ಸಮಾಜದ ಜನರ ಒತ್ತಾಯದಂತೆ ಕಾಲೋನಿ ರಸ್ತೆ ಅಭಿವೃದ್ಧಿಗೆ ₹50 ಲಕ್ಷ ಅನುದಾನ ಕೊಡಲಾಗಿದೆ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ತಿಳಿಸಿದರು. ಕಾಂಕ್ರೀಟ್ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಶಾಸಕರು ಮಾತನಾಡಿದರು. ಗ್ರಾಮದಲ್ಲಿ ಈಗಾಗಲೇ ವಿವಿಧ ರಸ್ತೆಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಲಾಗಿದೆ ಜೊತೆಗೆ ಗ್ರಾಮದ ಸಮುದಾಯ ಭವನ ನಿರ್ಮಾಣಕ್ಕೆ ₹30 ಲಕ್ಷ ಅನುದಾನ, ಬಸವೇಶ್ವರ ದೇವಾಲಯ ಜೀರ್ಣೋದ್ಧಾರಕ್ಕೆ ಹೆಚ್ಚಿನ ಅನುದಾನ ಸೇರಿ ಕಲ್ಲೇ ಸೋಮನಹಳ್ಳಿ ಏತ ನೀರಾವರಿ ಯೋಜನೆಯ ಮೂಲಕ ಸುಮಾರು 25ಕ್ಕೂ ಹೆಚ್ಚು ಕೆರೆಗಳನ್ನು ತುಂಬಿಸಲಾಗಿದೆ ಎಂದರು. ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಇಂಜಿನಿಯರ್‌ತ್ಯಾಗರಾಜ್, ಗುತ್ತಿಗೆದಾರ ನವೀನ್, ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಓಬಳಾಪುರ ಬಸವರಾಜ್, ಉದ್ಯಮಿ ಅಣತಿ ಯೋಗೇಶ್, ಮುಖಂಡರಾದ ವಿ.ಎನ್. ಮಂಜುನಾಥ್, ಹುಲಿಕೆರೆ ಸಂಪತ್ ಕುಮಾರ್, ತಮ್ಮಯಣ್ಣ, ಸಾವಿತ್ರಮ್ಮ, ಶಿವಯ್ಯ, ಲೋಕಿ, ನಟರಾಜ್, ರಮೇಶ್, ಗಂಗಯ್ಯ, ಎಂ. ಆರ್. ಕೃಷ್ಣಪ್ಪ, ಶಂಕರ್, ರಾಜೇಶ್ ಸೇರಿ ಗ್ರಾಮಸ್ಥರು ಹಾಜರಿದ್ದರು.

ಕೆಲ್ಲಂಗೆರೆಯಲ್ಲಿ ಉಡಿಸಲಮ್ಮದೇವಿ ರಥೋತ್ಸವ ಸಂಭ್ರಮ

ಹಾರನಹಳ್ಳಿ: ಸಮೀಪದ ಕಸಬಾ ಹೋಬಳಿಯ ಕೆಲ್ಲಂಗೆರೆ ಗ್ರಾಮ ದೇವತೆ ಶ್ರೀ ಉಡಿಸಲಮ್ಮದೇವಿಯವರ ಜಾತ್ರಾ ಮಹೋತ್ಸವವು ಭಾನುವಾರ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವೈಭವದಿಂದ ನಡೆಯಿತು. ಬೆಳಗ್ಗೆ ಮೂಲಸನ್ನಿಧಿಯಲ್ಲಿರುವ ಅಮ್ಮನವರಿಗೆ ವಿಶೇಷ ಪೂಜಾ ಕೈಂಕರ್ಯ, ಹೂವಿನ ಅಲಂಕಾರ ನೆರವೇರಿಸಲಾಯಿತು. ಶ್ರೀ ಹಟ್ಟಿ ಅಮ್ಮ, ಅಂತರಘಟ್ಟಮ್ಮ, ಉಡಿಸಲಮ್ಮ ಉತ್ಸವ ಮೂರ್ತಿಗಳಿಗೆ ಚಿನ್ನ, ಬೆಳ್ಳಿ ಒಡವೆಗಳನ್ನು ಶೃಂಗರಿಸಲಾಗಿತ್ತು. ನಂತರ ಗ್ರಾಮದೇವತೆಗಳನ್ನು ಕಳಲೆ ವಾದ್ಯಗಳೊಂದಿಗೆ ಉತ್ಸವದಲ್ಲಿ ಕರೆದಂದು ರಥ ಸಮೀಪದಲ್ಲಿ ಪೂಜೆ ಸಲ್ಲಿಸಿ ನಂತರ ರಥದ ಪುಣ್ಯಾಹಃ ನಡೆಯಿತು. ಬಳಿಕ ಗ್ರಾಮದೇವರುಗಳನ್ನು



ರಥಾರೋಹಣ ಮಾಡಿಸಿದರು. ಜಾತ್ರೆಯ ಆಕರ್ಷಣೆ ಶಿವಶಕ್ತಿಯ ರೂಪ ಪಡೆದ ಶ್ರೀ ಚಿಕ್ಕಯ್ಯ ಸ್ವಾಮಿ, ಶ್ರೀ ಧೂತರಾಯಸ್ವಾಮಿಗಳನ್ನು ಗಣ ಮಕ್ಕಳು ತಲೆಯ ಮೇಲೆ ಹೊತ್ತು ಪೂಜೆ ಸಲ್ಲಿಸಿದ ನಂತರ ಚಿಕ್ಕಯ್ಯ, ಧೂತರಾಯ ಸ್ವಾಮಿಗಳು ರಥದ ಚಕ್ರಕ್ಕೆ ಕಾಯಿ ಒಡೆಯುವ ಮೂಲಕ ಶ್ರೀ ಉಡಿಸಲಮ್ಮ ,ಅಂತರಘಟ್ಟಮ್ಮ,ಹಟ್ಟಿಅಮ್ಮ ರಥೋತ್ಸವ ಪ್ರಾರಂಭವಾಯಿತು, ಭಕ್ತರು ಬಾಳೆ ಹಣ್ಣು, ಎಸೆಯುವ ಮೂಲಕ ತಮ್ಮ ಭಕ್ತಿ ಭಾವ ಮೆರೆದರು, ನಂತರ ಕೆಂಚಪ್ಪನ ಸೇವೆ ಹಾಗೂ ಇತರೆ ಧಾರ್ಮಿಕ ಪೂಜೆಗಳು ಚಿಕ್ಕಯ್ಯ, ಧೂತರಾಯಸ್ವಾಮಿಗಳ ಸೋಮನ ಕುಣಿತ ನಡೆಯಿತು. ಅರಸೀಕೆರೆ ಸೇರಿ ಕೆಲ್ಲಂಗೆರೆ ಸುತ್ತ ಮುತ್ತಲಿನ ಗ್ರಾಮಸ್ಥರು ಜಾತ್ರೆಯಲ್ಲಿ ಭಾಗವಹಿಸಿದ್ದರು.

ಬೇಲೂರಿನಲ್ಲಿ ನಾಳೆಯಿಂದ ಧ್ಯಾನ ಶಿಬಿರ ಆರಂಭ: ಶಿಕ್ಷಕಿ ವೇದಶ್ರೀ

ಆರ್ಟ್ ಆಫ್ ಲಿವಿಂಗ್ ಸಂಸ್ಥೆಯಿಂದ ಶಿಬಿರ ಆಯೋಜನೆ



ಬೇಲೂರಿನಲ್ಲಿ ನಡೆಯಲಿರುವ ಧ್ಯಾನ ಹಾಗೂ ಉಸಿರಾಟ ಶಿಬಿರದ ಕುರಿತು ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಶಿಕ್ಷಕಿ ವೇದಶ್ರೀ ಮಾಹಿತಿ ನೀಡಿದರು.

ಬೇಲೂರು: ವೇಗವಾಗಿ ಸಾಗುತ್ತಿರುವ ಜೀವನಶೈಲಿಯಿಂದ ಮಾನಸಿಕ ಒತ್ತಡ ಮತ್ತು ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ದೇಹ ಮತ್ತು ಮನಸ್ಸಿನ ಸಮತೋಲನ ಕಾಪಾಡಿಕೊಳ್ಳುವುದು ಅಗತ್ಯವಾಗಿದೆ ಎಂದು ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಶಿಕ್ಷಕಿ ವೇದಶ್ರೀ ಹೇಳಿದರು.

ಪಟ್ಟಣದ ಮೌಂಟ್ ಫೋರ್ಟ್ ಶಾಲೆಯಲ್ಲಿ ಮೇ 5ರಿಂದ 10ರವರೆಗೆ ನಡೆಯಲಿರುವ ಧ್ಯಾನ ಹಾಗೂ ಉಸಿರಾಟ ಶಿಬಿರದ ಕುರಿತು ಮಾಹಿತಿ ನೀಡಿ ಅವರು ಮಾತನಾಡಿ, ಈ ಶಿಬಿರವು ಒಟ್ಟು 6 ದಿನಗಳ ಕಾಲ ನಡೆಯಲಿದ್ದು, ಭಾಗವಹಿಸುವವರು ಬೆಳಗ್ಗೆ 6ರಿಂದ 8.30ರವರೆಗೆ ಅಥವಾ ಸಂಜೆ 6ರಿಂದ 8.30ರವರೆಗೆ ತಮ್ಮ ಅನುಕೂಲಕ್ಕೆ ತಕ್ಕಂತೆ ಬ್ಯಾಚ್ ಆಯ್ಕೆ ಮಾಡಿಕೊಳ್ಳಬಹುದು. ಮೇ 4ರಂದು ಸಂಜೆ 6ರಿಂದ 8ರವರೆಗೆ ಅದೇ ಸ್ಥಳದಲ್ಲಿ ನೋಂದಣಿ ಹಾಗೂ ಪರಿಚಯ ತರಗತಿ ನಡೆಯಲಿದ್ದು, ಆಸಕ್ತರು ನೇರವಾಗಿ ಭಾಗವಹಿಸಿ ಹೆಸರು ನೋಂದಾಯಿಸಿಕೊಳ್ಳಬಹುದು ಎಂದು ಅವರು ತಿಳಿಸಿದರು. ಶಿಬಿರದಲ್ಲಿ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಬಗ್ಗೆ ವಿಶೇಷ ತರಬೇತಿ ನೀಡಲಾಗುತ್ತದೆ. ದೈನಂದಿನ ಒತ್ತಡದಿಂದ ಹೊರಬಂದು ಮನಸ್ಸಿಗೆ ಶಾಂತಿ ನೀಡುವುದು, ಏಕಾಗ್ರತೆ ಹೆಚ್ಚಿಸುವುದು ಹಾಗೂ ಜೀವನದತ್ತ ಸಕಾರಾತ್ಮಕ ದೃಷ್ಟಿಕೋನ ಬೆಳೆಸಿಕೊಳ್ಳುವುದು ಇದರ ಪ್ರಮುಖ ಉದ್ದೇಶವಾಗಿದೆ. ವಿಶೇಷವಾಗಿ ಸುದರ್ಶನ ಕ್ರಿಯೆ ಸೇರಿ ವಿವಿಧ ಉಸಿರಾಟ ವಿಧಾನಗಳನ್ನು ನುರಿತ ಶಿಕ್ಷಕರಿಂದ ಕಲಿಸಲಾಗುತ್ತದೆ. ಭಾಗವಹಿಸುವವರು ನೀಡುವ ದೇಣಿಗೆಯನ್ನು ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಮೂಲಕ ನಡೆಯುತ್ತಿರುವ ಉಚಿತ ಶಾಲೆಗಳು ಹಾಗೂ ಸಮಾಜಮುಖಿ ಯೋಜನೆಗಳಿಗೆ ವಿನಿಯೋಗಿಸಲಾಗುತ್ತದೆ ಎಂದು ತಿಳಿಸಿದರು. ಈಗಾಗಲೇ ಶಿಬಿರಕ್ಕೆ 40ಕ್ಕೂ ಹೆಚ್ಚು ಜನರು ನೋಂದಾಯಿಸಿಕೊಂಡಿದ್ದು, ಉತ್ತಮ ಸ್ಪಂದನೆ ವ್ಯಕ್ತವಾಗಿದೆ. ವಿಶ್ವದ 192 ದೇಶಗಳಲ್ಲಿ ಕೋಟ್ಯಾಂತರ ಜನರು ಈ ತರಬೇತಿಯಿಂದ ಲಾಭ ಪಡೆದಿದ್ದಾರೆ ಎಂದು ಹೇಳಿದರು.

ಚನ್ನಬಸಪ್ಪ ,ಕೇಶವಮೂರ್ತಿ , ಹರೀಶ್, ನಿರಂಜನ್ ಎ.ಸಿ. ಇದ್ದರು

ಆಧ್ಯಾತ್ಮ ದರ್ಶನ

ಬಾಗೇಶಪುರದಲ್ಲಿ ‘ಚಂದಮಾಮನ ತೇರು’ ಸಂಭ್ರಮದಲ್ಲಿ ಆಶೀರ್ವಚನ ನೀಡಿದ ಶಂಭುನಾಥ ಸ್ವಾಮೀಜಿ

ಗುರುವಿನ ಮಾರ್ಗದರ್ಶನದಿಂದ ಶಾಂತಿ, ಸಾರ್ಥಕತೆ ಸಾಧ್ಯ

• **ಕನ್ನಡಪ್ರಭ ವಾರ್ತೆ** ಅರಸೀಕೆರೆ

ತಾಲೂಕಿನ ಬಾಗೇಶಪುರ ಗ್ರಾಮದಲ್ಲಿ ನಡೆದ ‘ಗುರು ತೋರಿದ ದಾರಿ- ಚಂದಮಾಮನ ತೇರು 140ರ ಸಂಭ್ರಮ’ ಕಾರ್ಯಕ್ರಮವು ಭಕ್ತಿ ಭಾವ, ಸಂಸ್ಕೃತಿ ಹಾಗೂ ಸಂಪ್ರದಾಯಗಳ ಸಮನ್ವಯದೊಂದಿಗೆ ಅದ್ಧೂರಿಯಾಗಿ ಜರುಗಿತು. ಬೆಳದಿಂಗಳ ಮೃದುವಾದ ಬೆಳಕಿನ ನಡುವೆ ವೇದಘೋಷಗಳು ಮೊಳಗುತ್ತಿದ್ದಂತೆ, ಚಂದಮಾಮನ ತೇರು ಸಂಚಾರ ಭಕ್ತರನ್ನು ಆಧ್ಯಾತ್ಮಿಕ ಲೋಕಕ್ಕೆ ಕರೆದೊಯ್ದ ಅಪೂರ್ವ ಕ್ಷಣಕ್ಕೆ ಗ್ರಾಮಸ್ಥರು ಸಾಕ್ಷಿಯಾದರು.

ಗ್ರಾಮದ ಅದಿದೇವತೆ ಮೈಸೂರಮ್ಮ ದೇವಿಯ ನೂತನ ದೇವಾಲಯದ ಸವಿನೆನಪಿನೊಂದಿಗೆ ಈ ಉತ್ಸವ ನಡೆಯಿತು. ತಳಿರು ತೋರಣಗಳಿಂದ ಅಲಂಕರಿಸಿದ ಗ್ರಾಮದ ಬೀದಿಗಳು, ಮಕ್ಕಳ ಮತ್ತು ಮಹಿಳೆಯರ ಸಂಭ್ರಮ, ಗುರುಪಾದ ಪೂಜೆಯೊಂದಿಗೆ ಭಕ್ತಿ ಭಾವದ ಪ್ರದರ್ಶನ ಇವೆಲ್ಲವೂ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದವು.



ಶಾಸಕ ಶಿವಲಿಂಗೇಗೌಡರು ಶಂಭುನಾಥ ಸ್ವಾಮೀಜಿಯ ಪಾದಪೂಜೆ ಮಾಡಿ ಗೌರವಿಸಿದರು.

ಕಾರ್ಯಕ್ರಮಕ್ಕೆ ಆಗಮಿಸಿದ ಹಾಸನ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಶಂಭುನಾಥ ಸ್ವಾಮೀಜಿಯನ್ನು ಗ್ರಾಮಸ್ಥರು ಮಂಗಳವಾದ್ಯಗಳೊಂದಿಗೆ ಪೂರ್ಣಕುಂಭ ಸ್ವಾಗತ ನೀಡಿ, ಪಾದಪೂಜೆ ಮಾಡುವ ಮೂಲಕ ಗೌರವಿಸಿದರು. ಬಳಿಕ ಭಕ್ತರಿಗೆ ಆಶೀರ್ವಚನ ನೀಡಿದ ಸ್ವಾಮೀಜಿ, ಗುರುವಿನ ಸ್ಥಾನ ನಮ್ಮ ಸಂಸ್ಕೃತಿಯಲ್ಲಿ ಅತ್ಯುನ್ನತವಾಗಿದೆ. ಗುರುವಿನ ಮಾರ್ಗದರ್ಶನವನ್ನು ಅನುಸರಿಸಿದರೆ ಜೀವನದಲ್ಲಿ ಶಾಂತಿ ಮತ್ತು ಸಾರ್ಥಕತೆ ದೊರೆಯುತ್ತದೆ ಎಂದು ಹೇಳಿದರು.

ಭೈರವೈಕ್ಯ ಡಾ. ಬಾಲ ಗಂಗಾಧರನಾಥ ಮಹಾಸ್ವಾಮೀಜಿಗಳು ತೋರಿದ ದಾರಿಯಲ್ಲಿ ನಡೆಯುತ್ತಿರುವ ಈ ತೇರು ಉತ್ಸವವು, ಭಕ್ತರ ನಡುವೆ ಸಂಸ್ಕಾರ ಮತ್ತು ಆತ್ಮೀಯ ಬಾಂಧವ್ಯವನ್ನು ಬಲಪಡಿಸುತ್ತಿರುವುದು ಸಂತೋಷಕರ ಎಂದು ಅಭಿಪ್ರಾಯಪಟ್ಟರು.

> ಬಡತನ ಮತ್ತು ಸಿರಿತನ ಜೀವನದ ಭಾಗಗಳು. ಬಡತನ ಮನಸ್ಸಿಗೆ ಇಳಿಯಬಾರದು, ಸಿರಿತನ ತಲೆಗೆ ಏರಬಾರದು. ಎರಡನ್ನೂ ಸಮಚಿತ್ತದಿಂದ ಸ್ವೀಕರಿಸುವ ಗುಣವೇ ಮನುಷ್ಯನನ್ನು ಮಹಾನ್ ವ್ಯಕ್ತಿಯನ್ನಾಗಿ ಮಾಡುತ್ತದೆ.
>
> • **ಶಂಭುನಾಥ ಸ್ವಾಮೀಜಿ,** ಆದಿಚುಂಚನಗಿರಿ ಮಹಾಸಂಸ್ಥಾನ ಮಠ ಹಾಸನ

ರಾಜ್ಯ ಗೃಹ ಮಂಡಳಿ ಅಧ್ಯಕ್ಷರೂ ಆಗಿರುವ ಶಾಸಕ ಕೆ.ಎಂ. ಶಿವಲಿಂಗೇಗೌಡ ಮಾತನಾಡಿ, ಆಧುನಿಕ ಜೀವನದ ಓಟದಲ್ಲಿರುವ ಮಾನವನು ಮನಶಾಂತಿಗಾಗಿ ಆಧ್ಯಾತ್ಮಿಕತೆಯತ್ತ ಮುಖ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಶಂಭುನಾಥ ಸ್ವಾಮೀಜಿಗಳು ಭಕ್ತರಲ್ಲಿ ಧಾರ್ಮಿಕತೆ ಹಾಗೂ ಸನ್ಮಾರ್ಗದ ಚಿಂತನೆ ಬೆಳೆಸುವ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಸಂಚಾಲಕರಾದ ಎಚ್. ಬಿ. ಮದನ್ ಗೌಡ ಮಾತನಾಡಿ, ಪೂಜ್ಯ ಬಾಲಗಂಗಾಧರನಾಥ ಮಹಾಸ್ವಾಮೀಜಿಗಳ ಸಂಕಲ್ಪವನ್ನು ಶಂಭುನಾಥ ಸ್ವಾಮೀಜಿಗಳು ಕಾರ್ಯರೂಪಕ್ಕೆ ತಂದಿದ್ದು, ಹಾಸನ ಹಾಗೂ ಕೊಡಗು ಜಿಲ್ಲೆಗಳಲ್ಲಿ ಧಾರ್ಮಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಮಹತ್ವದ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಬೋಚೇಹಳ್ಳಿ ಮಠದ ಶಿವಾನಂದ ಸ್ವಾಮೀಜಿ, ಗೀಜಿಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಧರ್ಮೇಶ್ ಸೇರಿದಂತೆ ಗ್ರಾಮಸ್ಥರು ಮತ್ತು ಮುಖಂಡರು ಉಪಸ್ಥಿತರಿದ್ದರು.

ರಾಜ್ಯಮಟ್ಟದ ಜೆಪಿಎಲ್ ಕ್ರಿಕೆಟ್‌ಗೆ ಜೆಡಿಎಸ್ ಸಜ್ಜು

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹುಟ್ಟುಹಬ್ಬ ಅಂಗವಾಗಿ 15ರಿಂದ 3 ದಿನ ಬೆಂಗಳೂರಿನಲ್ಲಿ ನಡೆಯಲಿರುವ ಟೂರ್ನಿ

• **ಕನ್ನಡಪ್ರಭ ವಾರ್ತೆ** ಹಾಸನ

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಹುಟ್ಟುಹಬ್ಬ ಹಾಗೂ ಜನತಾ ದಳ (ಜಾತ್ಯತೀತ) ಪಕ್ಷದ ರಜತ ಮಹೋತ್ಸವದ ಅಂಗವಾಗಿ ಇದೇ ತಿಂಗಳ 15, 16 ಮತ್ತು 17ರಂದು ಬೆಂಗಳೂರಿನಲ್ಲಿ ನಡೆಯಲಿರುವ ಜೆಪಿಎಲ್-2026 ಜನತಾ ದಳ ಪ್ರೀಮಿಯರ್‌ಲೀಗ್ ಕ್ರಿಕೆಟ್ ಪಂದ್ಯಾವಳಿಗೆ ಹಾಸನ ಜಿಲ್ಲೆಯ 'ಹೊಯ್ಸಳ ವಾರಿಯರ್ಸ್' ತಂಡದ ಲೋಗೋವನ್ನು ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಹಾಗೂ ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್. ಲಿಂಗೇಶ್ ನಗರದಲ್ಲಿನ ಪ್ರವಾಸಿ ಮಂದಿರದಲ್ಲಿ ಬಿಡುಗಡೆಗೊಳಿಸಿದರು.



ಹಾಸನ ಜಿಲ್ಲೆಯ 'ಹೊಯ್ಸಳ ವಾರಿಯರ್ಸ್' ತಂಡದ ಲೋಗೋವನ್ನು ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಹಾಗೂ ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್. ಲಿಂಗೇಶ್ ಬಿಡುಗಡೆಗೊಳಿಸಿದರು.

ಸೂರಜ್ ರೇವಣ್ಣ ಅವರು ಮಾಧ್ಯಮದೊಂದಿಗೆ ಮಾತನಾಡಿ, ನಮ್ಮ ನಾಯಕರಾದ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಜನ್ಮದಿನವು ಕೇವಲ ಕುಟುಂಬದ ಅಥವಾ ಪಕ್ಷದ ಆಚರಣೆ ಮಾತ್ರವಲ್ಲ, ಅದು ಲಕ್ಷಾಂತರ ಕಾರ್ಯಕರ್ತರ ಹಬ್ಬವಾಗಿದೆ. ಅವರ ಜನ್ಮದಿನವನ್ನು ವಿಭಿನ್ನವಾಗಿ ಆಚರಿಸುವ ಉದ್ದೇಶದಿಂದ ಈ ರಾಜ್ಯಮಟ್ಟದ ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ ಎಂದು ಹೇಳಿದರು. ಪಕ್ಷದ 25ನೇ ವರ್ಷದ ರಜತ ಮಹೋತ್ಸವವೂ ಇದೇ ಸಂದರ್ಭದಲ್ಲಿ ನಡೆಯುತ್ತಿರುವುದರಿಂದ ಜೆಡಿಎಸ್ ಕಾರ್ಯಕರ್ತರಿಗೆ ಮತ್ತಷ್ಟು ಉತ್ಸಾಹ ಬಂದಿದೆ. ಕೇವಲ ಸಭೆ- ಸಮಾವೇಶಗಳಿಗೆ ಸೀಮಿತವಾಗದೇ, ಯುವಕರಿಗೆ ಕ್ರೀಡಾ ವೇದಿಕೆ ಕಲ್ಪಿಸುವ ಮೂಲಕ ಸಂಘಟನೆಯನ್ನು ಬಲಪಡಿಸುವ ಪ್ರಯತ್ನ ಇದು ಎಂದು ಅವರು ತಿಳಿಸಿದರು.

ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಿಂದ ಜೆಡಿಎಸ್ ಕಾರ್ಯಕರ್ತರು, ಯುವ ಮುಖಂಡರು, ಕ್ರೀಡಾಪಟುಗಳು ಹಾಗೂ ಅಭಿಮಾನಿಗಳು ಈ ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದಾರೆ. ಎಲ್ಲಾ ತಾಲೂಕು ಮತ್ತು ಕೇಂದ್ರ ಮಟ್ಟದ ಪ್ರತಿಭಾವಂತ ಆಟಗಾರರಿಗೆ ಅವಕಾಶ ನೀಡುವ ಉದ್ದೇಶದಿಂದಲೇ ಈ ಟೂರ್ನಿಯನ್ನು ರೂಪಿಸಲಾಗಿದೆ ಎಂದು ಹೇಳಿದರು.

ಕ್ರೀಡೆ ಯುವಕರಲ್ಲಿ ಶಿಸ್ತು, ನಾಯಕತ್ವ, ತಂಡದ ಮನೋಭಾವ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುತ್ತದೆ. ರಾಜಕೀಯ ಕ್ಷೇತ್ರದಲ್ಲಿ ಕೆಲಸ ಮಾಡುವವರಿಗೂ ಈ ಗುಣಗಳು ಅಗತ್ಯ, ಆದ್ದರಿಂದ ಕ್ರೀಡೆ ಮತ್ತು ರಾಜಕೀಯ ಎರಡನ್ನೂ ಸಮನಾಗಿ ಪ್ರೋತ್ಸಾಹಿಸುವ ಕೆಲಸವನ್ನು ನಾವು ಮಾಡುತ್ತಿದ್ದೇವೆ ಎಂದು ಅಭಿಪ್ರಾಯಪಟ್ಟರು.

ಮೇ 15, 16 ಮತ್ತು 17ರಂದು ಮೂರು ದಿನಗಳ ಕಾಲ ಬೆಂಗಳೂರಿನ ಮಾದಾವರದಲ್ಲಿರುವ ನೈಸ್ ಗ್ರೌಂಡ್‌ನಲ್ಲಿ ಈ ಕ್ರಿಕೆಟ್ ಪಂದ್ಯಾವಳಿ ನಡೆಯಲಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ ತಂಡಗಳು ಸ್ಪರ್ಧಿಸಲಿದ್ದು, ಹಾಸನ ಜಿಲ್ಲೆಯಿಂದ 'ಹೊಯ್ಸಳ ವಾರಿಯರ್ಸ್' ತಂಡ ಬಲಿಷ್ಠ ಸ್ಪರ್ಧಿಯಾಗಿ ಕಣಕ್ಕಿಳಿಯಲಿದೆ ಎಂದು ತಿಳಿಸಿದರು.

ಮಾಜಿ ಶಾಸಕ ಹಾಗೂ ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್. ಲಿಂಗೇಶ್ ಮಾತನಾಡಿ, ಹಾಸನ ಜಿಲ್ಲೆ ಜೆಡಿಎಸ್ ಪಕ್ಷದ ಭದ್ರಕೋಟೆ. ಈ ಜಿಲ್ಲೆಯ ಯುವಕರಲ್ಲಿ ಅಪಾರ ಪ್ರತಿಭೆ ಇದೆ, ಅವರನ್ನು ಕ್ರೀಡಾ ಕ್ಷೇತ್ರದ ಮೂಲಕ ಒಗ್ಗೂಡಿಸಿ ಒಂದು ಶಕ್ತಿಶಾಲಿ ತಂಡವಾಗಿ ರೂಪಿಸುವ ಕೆಲಸ ನಡೆಯುತ್ತಿದೆ ಎಂದು ಹೇಳಿದರು.

ಸೂರಜ್ ರೇವಣ್ಣ ಅವರ ನೇತೃತ್ವದಲ್ಲಿ ಹೊಯ್ಸಳ ವಾರಿಯರ್ಸ್ ತಂಡ ರಚನೆಯಾಗಿದೆ, ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಯ್ಕೆಯಾದ ಯುವ ಆಟಗಾರರು ಈ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ರಾಜ್ಯಮಟ್ಟದ ಈ ಪಂದ್ಯಾವಳಿಯಲ್ಲಿ ಹಾಸನ ಜಿಲ್ಲೆಯ ಗೌರವ ಹೆಚ್ಚಿಸುವ ವಿಶ್ವಾಸ ನಮ್ಮದು ಎಂದು ಹೇಳಿದರು.

ಈ ಪಂದ್ಯಾವಳಿಯ ಮೂಲಕ ಕೇವಲ ಕ್ರಿಕೆಟ್ ಮಾತ್ರವಲ್ಲ, ಪಕ್ಷದ ಸಂಘಟನೆಯೂ ಇನ್ನಷ್ಟು ಬಲವಾಗಲಿದೆ. ಯುವಕರನ್ನು ರಾಜಕೀಯ ಹಾಗೂ ಸಾಮಾಜಿಕ ಚಟುವಟಿಕೆಗಳತ್ತ ಸೆಳೆಯಲು ಇಂತಹ ಕಾರ್ಯಕ್ರಮಗಳು ಬಹಳ ಅಗತ್ಯ ಎಂದು ತಿಳಿಸಿದರು.

ಇದು ಕೇವಲ ಒಂದು ಪಂದ್ಯಾವಳಿ ಅಲ್ಲ, ಇದು ಕಾರ್ಯಕರ್ತರ ಒಗ್ಗಟ್ಟಿನ ಸಂಕೇತ. ರಾಜ್ಯದ ಎಲ್ಲಾ ಜಿಲ್ಲೆಗಳ ಜೆಡಿಎಸ್ ಕುಟುಂಬವನ್ನು ಒಂದೇ ವೇದಿಕೆಯಲ್ಲಿ ಸೇರಿಸುವ ದೊಡ್ಡ ಹಬ್ಬ. ಈ ಕ್ರೀಡಾಕೂಟದಿಂದ ಪಕ್ಷದ ಯುವ ಘಟಕಕ್ಕೆ ಹೊಸ ಶಕ್ತಿ ಸಿಗಲಿದೆ ಎಂದು ಅವರು ಹೇಳಿದರು.

ಹೊಯ್ಸಳ ವಾರಿಯರ್ಸ್ ತಂಡದ ಲೋಗೋ ಬಿಡುಗಡೆ ಕಾರ್ಯಕ್ರಮವು ಉತ್ಸಾಹಭರಿತ ವಾತಾವರಣದಲ್ಲಿ ನಡೆಯಿತು. ಪಕ್ಷದ ಮುಖಂಡರು, ಕಾರ್ಯಕರ್ತರು, ಯುವ ಜನತಾದಳದ ಪದಾಧಿಕಾರಿಗಳು ಹಾಗೂ ಅನೇಕ ಅಭಿಮಾನಿಗಳು ಭಾಗವಹಿಸಿ ತಂಡಕ್ಕೆ ಶುಭ ಹಾರೈಸಿದರು.

ಸುದ್ದಿ ಸಿಂಚನ

6ರಂದು ದಬ್ಬಳ್ಳಿಕಟ್ಟೆಯಲ್ಲಿ ಅರ್ಜುನ ಆನೆಯ ಸ್ಮಾರಕ ಲೋಕಾರ್ಪಣಾ ಕಾರ್ಯ



ಸಕಲೇಶಪುರ: ತಾಲೂಕಿನ ಯಸಳೂರು ಅರಣ್ಯ ವಲಯದಲ್ಲಿ 2023ರ ಡಿಸೆಂಬರ್‌4ರಂದು ನಡೆದ ಪುಂಡಾನೆ ಸೆರೆ ಕಾರ್ಯಾಚರಣೆಯ ವೇಳೆ ವೀರಾವೇಶದಿಂದ ಹೋರಾಡಿ ಪಶುವೈದ್ಯರು ಹಾಗೂ ಸಿಬ್ಬಂದಿ ಜೀವ ಉಳಿಸಿ ಹುತಾತ್ಮನಾದ ಪ್ರಸಿದ್ಧ ಅರ್ಜುನ ಆನೆಯ ಸಮಾಧಿ ಸ್ಥಳ(ದಬ್ಬಳ್ಳಿಕಟ್ಟೆ)ದಲ್ಲಿ ನಿರ್ಮಿಸಿರುವ ಸ್ಮಾರಕವನ್ನು ಮೇ 6ರಂದು ಉದ್ಘಾಟಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಅರ್ಜುನ ಆನೆ ದಸರಾ ಮಹೋತ್ಸವದಲ್ಲಿ 8 ಬಾರಿ ಚಿನ್ನದ ಅಂಬಾರಿ ಹೊತ್ತು ಗಜಗಾಂಭೀರ್ಯದಿಂದ ಹೆಜ್ಜೆಹಾಕಿ ಜನರ ಮನಗೆದ್ದಿದ್ದು ವಿಶೇಷ. ಈ ಆನೆಯ ಸಾವಿನಿಂದ ಅರಣ್ಯ ಇಲಾಖೆಗೆ ಅಪಾರ ನಷ್ಟ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ಸಮಾಧಿ ಸ್ಥಳದಲ್ಲಿಯೂ ಹಾಗೂ ನಾಗರಹೊಳೆಯ ಬಳ್ಳೆ ಶಿಬಿರದಲ್ಲಿಯೂ ಸ್ಮಾರಕ ನಿರ್ಮಿಸಲಾಗುವುದು ಎಂದು ಸರ್ಕಾರ ಘೋಷಿಸಿತ್ತು. ಅದರಂತೆ ಈಗಾಗಲೇ ನಾಗರಹೊಳೆಯ ಬಳ್ಳೆ ಶಿಬಿರದಲ್ಲಿ ಅರ್ಜುನನ ಹಿರಿಮೆ ಮತ್ತು ಸಾಹಸಗಾಥೆಗಳನ್ನು ಇಂದಿನ ಹಾಗೂ ಮುಂದಿನ ಪೀಳಿಗೆಗೂ ಪರಿಚಯಿಸುವ ಉದ್ದೇಶದಿಂದ ಸ್ಮಾರಕವನ್ನು ನಿರ್ಮಿಸಿ ಅನಾವರಣ ಮಾಡಲಾಗಿದೆ. ಇದೀಗ ಮೇ 6ರಂದು ಯಸಳೂರಿನ ಸಮಾಧಿ ಸ್ಥಳದಲ್ಲಿರುವ ಸ್ಮಾರಕವನ್ನು ಉದ್ಘಾಟಿಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಎರಡು ಸ್ಥಳಗಳಲ್ಲಿಯೂ ಅರ್ಜುನ ಆನೆಯ ಪ್ರತಿರೂಪದಂತಿರುವ ಭವ್ಯ ಪ್ರತಿಮೆಗಳು ನಿರ್ಮಾಣಗೊಂಡಿದ್ದು, ವಿವಿಧ ಆನೆ ಕಾರ್ಯಾಚರಣೆಗಳು, ಹುಲಿ ಮತ್ತು ಚಿರತೆ ನಿಯಂತ್ರಣ ಕಾರ್ಯಾಚರಣೆಗಳು ಹಾಗೂ ದಸರಾ ಮಹೋತ್ಸವದಲ್ಲಿ ಪಾಲ್ಗೊಂಡಿರುವ ಅರ್ಜುನನ ಅಪರೂಪದ ಛಾಯಾಚಿತ್ರಗಳನ್ನು ಅಳವಡಿಸುವಂತೆ ಸೂಚಿಸಲಾಗಿದೆ ಎಂದರು. ಕಾರ್ಯಕ್ರಮಕ್ಕೆ ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಭೈರೇಗೌಡ, ಸ್ಥಳೀಯ ಶಾಸಕರು ಹಾಗೂ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ಅವರು ವಿವರಿಸಿದರು.

ಆರೋಗ್ಯವಾಗಿದ್ದರೆ ಮಾತ್ರ ಸುಖ ಜೀವನ: ಸಿಮೆಂಟ್ ಮಂಜು

• **ಕನ್ನಡಪ್ರಭ ವಾರ್ತೆ** ಸಕಲೇಶಪುರ

ರೋಗಗಳು ಬರುವ ಮುನ್ನವೇ ಎಚ್ಚರ ವಹಿಸಿದರೆ ಆಸ್ಪತ್ರೆ ಹಾಗೂ ಔಷಧಿಗಳ ಅವಲಂಬನೆ ಕಡಿಮೆ ಮಾಡಬಹುದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲೂಕಿನ ಬಾಳ್ಳುಪೇಟೆಯ ಶ್ರೀ ಕೆಂಚಮ್ಮ ಮಲ್ಲೇಗೌಡ ಸಮುದಾಯ ಭವನದಲ್ಲಿ ಶುಕ್ರವಾರ ಬಿಜೆಪಿ ಮುಖಂಡ ಜಯಪ್ರಕಾಶ್ ದೊಡ್ಡದಿಣ್ಣೆ ಅವರ ನೇತೃತ್ವದಲ್ಲಿ, ಮಂಗಳೂರಿನ ಫಾದರ್‌ಮುಲ್ಲರ್ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ಹಾಗೂ ಯುವ ವೈದ್ಯ ಡಾ. ಲಕ್ಷ್ಮಣ್ ಗಂಗಾ ಅವರ ಮಾರ್ಗದರ್ಶನದಲ್ಲಿ ಆಯೋಜಿಸಲಾದ ಉಚಿತ ಆರೋಗ್ಯ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆರೋಗ್ಯವಾಗಿದ್ದರೆ ಮಾತ್ರ ಸುಖ ಜೀವನ ನಡೆಸಲು ಸಾಧ್ಯ. ಇಲ್ಲದಿದ್ದರೆ ದುಡಿದ ಹಣವನ್ನೆಲ್ಲಾ ಆಸ್ಪತ್ರೆಗಳಿಗೆ ಖರ್ಚು ಮಾಡಬೇಕಾಗುತ್ತದೆ. ಆದ್ದರಿಂದ ರೋಗದ ಲಕ್ಷಣಗಳು ಕಾಣಿಸುವುದಕ್ಕೂ ಮುನ್ನವೇ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಂಡು ವೈದ್ಯರು ನೀಡುವ ಸಲಹೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಅವರು ಸಲಹೆ ನೀಡಿದರು.



ಆರೋಗ್ಯ ಶಿಬಿರಗಳು ಬಡವರಿಗೆ ಹೆಚ್ಚಿನ ಅನುಕೂಲ ಕಲ್ಪಿಸುತ್ತವೆ, ಇಂತಹ ಶಿಬಿರಗಳನ್ನು ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿ ಆಯೋಜಿಸುವ ಅಗತ್ಯವಿದೆ.

ಇಂದಿನ ಒತ್ತಡಪೂರ್ಣ ಜೀವನದಲ್ಲಿ ಆರೋಗ್ಯ ಕಾಪಾಡಿಕೊಳ್ಳುವುದು ಸವಾಲಾಗಿದ್ದು, ಇಂತಹ ಶಿಬಿರಗಳು ಗ್ರಾಮೀಣ ಜನತೆಗೆ ಸಹಕಾರಿಯಾಗುತ್ತವೆ ಎಂದು ತಿಳಿಸಿದರು. ಶಿಬಿರದಲ್ಲಿ ವಿವಿಧ ವಿಭಾಗಗಳ ವೈದ್ಯರಿಂದ ಸುಮಾರು 500ಕ್ಕೂ ಹೆಚ್ಚು ರೋಗಿಗಳಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಲಾಯಿತು. ಮಾಜಿ ಶಾಸಕ ಎಚ್.ಎಂ. ವಿಶ್ವನಾಥ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಚಂಚಲ ಕುಮಾರಸ್ವಾಮಿ, ಶಾಸಕ ಸಿಮೆಂಟ್ ಮಂಜು ಅವರ ಧರ್ಮಪತ್ನಿ ಪ್ರತಿಭಾ ಮಂಜುನಾಥ್, ಹಿಂದೂಪರ ಸಂಘಟನೆಗಳ ಮುಖಂಡ ರಘು ಸಕಲೇಶಪುರ, ಕರವೇ ಜಿಲ್ಲಾ ಕಾರ್ಯದರ್ಶಿ ರಘು ಪಾಳ್ಯ, ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನೇತ್ರಾವತಿ ಮಂಜುನಾಥ್, ಯಡೇಹಳ್ಳಿ ಮಂಜುನಾಥ್ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಸದಸ್ಯರು ಭಾಗವಹಿಸಿದ್ದರು.

ಕೊಪ್ಪಲು ಮಾರಮ್ಮಳ ಸಡಗರದ ಸುಗ್ಗಿ ಜಾತ್ರೆ, ಕೊಂಡೋತ್ಸವ



ಭಕ್ತಿಭಾವದೊಂದಿಗೆ ಜರುಗಿದ ಕೊಪ್ಪಲು ಮಾರಮ್ಮನ ಕೊಂಡೋತ್ಸವ.

• **ಕನ್ನಡಪ್ರಭ ವಾರ್ತೆ** ಸಕಲೇಶಪುರ

ಪಟ್ಟಣದ ಗ್ರಾಮ ದೇವತೆ ಕೊಪ್ಪಲು ಮಾರಮ್ಮನ ಸುಗ್ಗಿ ಜಾತ್ರೆ ಹಾಗೂ ಕೊಂಡೋತ್ಸವ ಸಡಗರ , ಭಕ್ತಿಭಾವದಿಂದ ಜರುಗಿತು.

ಮಹೇಶ್ವರಿ ನಗರದಲ್ಲಿರುವ ಗ್ರಾಮದ ಆದಿ ದೇವತೆ ಕೊಪ್ಪಲು ಮಾರಮ್ಮ ಅವರ ಸುಗ್ಗಿ ಜಾತ್ರೆ ಕಳೆದ ಆರು ದಿನಗಳಿಂದ ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ನಡೆಯಿತು. ದೇವಸ್ಥಾನ ನವೀಕರಣಗೊಂಡ ಹಿನ್ನೆಲೆ ಕಳೆದ ಸೋಮವಾರದಿಂದ ದೇವಿಗೆ ವಿಶೇಷ ವಾಸ್ತು ಹೋಮ ಸೇರಿ ವಿವಿಧ ಪೂಜೆಗಳನ್ನು ನೆರವೇರಿಸಲಾಯಿತು.

ಮಂಗಳವಾರ ಅಮ್ಮನವರಿಗೆ ದುರ್ಗಾ ಹೋಮ ಹಾಗೂ ಮಾರಿಕಾಂಬ ಹೋಮ ನೆರವೇರಿಸಲಾಯಿತು. ಪಂಚಾಮೃತ ಅಭಿಷೇಕದೊಂದಿಗೆ ಸುಗ್ಗಿ ಜಾತ್ರೆಗೆ ಚಾಲನೆ ನೀಡಲಾಯಿತು.

ಶುಕ್ರವಾರ ಅಮ್ಮನವರನ್ನು ಮಹೇಶ್ವರಿ ನಗರ, ಅಜಾದ್ ರಸ್ತೆ, ಹಳೆಸಂತೆವೇರಿ ಬಡಾವಣೆ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಊರಾಡಿಸಿ ಭಕ್ತರಿಂದ ಪೂಜೆ ಸಲ್ಲಿಸಲಾಯಿತು. ರಾತ್ರಿ ವಿದ್ಯುತ್ ಅಲಂಕಾರದ ನಡುವೆ ಪಟ್ಟಣದ ರಾಜಬೀದಿಯಲ್ಲಿ ಬೆಳ್ಳಿ ರಥದಲ್ಲಿ ಮೆರವಣಿಗೆ ನಡೆಸಲಾಯಿತು.

ಶುಕ್ರವಾರ ರಾತ್ರಿ ಸುಗ್ಗಿ ಕುಣಿತ ನಡೆದಿದ್ದು, ಶನಿವಾರ ಬೆಳಗ್ಗಿನ ಜಾವ ಕೊಂಡೋತ್ಸವ ಜರುಗಿತು. ಈ ಸಂದರ್ಭದಲ್ಲಿ ನೂರಾರು ಭಕ್ತರು ಕೆಂಡದಲ್ಲಿ ನಡೆದು ತಮ್ಮ ಹರಕೆಗಳನ್ನು ನೆರವೇರಿಸಿದರು. ಜಾತ್ರೆಯ ಅವಧಿಯಲ್ಲೆಲ್ಲಾ ಭಕ್ತರಿಗೆ ಅನ್ನದಾನ ಪ್ರಸಾದ ವಿತರಿಸಲಾಯಿತು.

ಶನಿವಾರ ರಾತ್ರಿ ದೇವತೆಯ ಬಂಟರಾದ ಭೂತರಾಯ, ಕೆಂಚರಾಯ ಹಾಗೂ ಕರಿರಾಯರಿಗೆ ಕೋಳಿ ಮತ್ತು ಕುರಿಗಳನ್ನು ಧೂಳ್‌ಮರಿ ಹರಕೆಯಾಗಿ ಅರ್ಪಿಸಲಾಯಿತು. ಮಾರಮ್ಮ ದೇವಸ್ಥಾನದ ಆಡಳಿತ ಮಂಡಳಿಯ ವತಿಯಿಂದ ಈ ಎಲ್ಲಾ ಧಾರ್ಮಿಕ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ, ಶ್ರದ್ಧೆ ಮತ್ತು ಭಕ್ತಿಯಿಂದ ಆಯೋಜಿಸಲಾಯಿತು. ಭಾನುವಾರ ಮಧ್ಯಾಹ್ನದಿಂದ ಮಹಾ ಅನ್ನಸಂತರ್ಪಣೆ ನಡೆಯಲಿದೆ ಎಂದು ಆಡಳಿತ ಸಮಿತಿ ತಿಳಿಸಿದೆ.

ನಿವೃತ್ತ ಕ್ಯಾಷಿಯರ್ ಮಂಜುನಾಥ್‌ಗೆ ಬೀಳ್ಕೊಡುಗೆ

• **ಕನ್ನಡಪ್ರಭ ವಾರ್ತೆ** ಬೇಲೂರು

ಪಟ್ಟಣದ ಎಸ್ ಬಿಐ ಬ್ಯಾಂಕ್ ಶಾಖೆಯ ಕ್ಯಾಷಿಯರ್‌ಮಂಜುನಾಥ್ ಅವರು ನಿವೃತ್ತಿ ಹೊಂದಿದ್ದು, ಡಾ. ರಾಜ್ ಅಭಿಮಾನಿಗಳ ಸಂಘದಿಂದ ಸನ್ಮಾನಿಸಿ ಬೀಳ್ಕೊಡಲಾಯಿತು.

ಎಸ್‌ಬಿಐ ಬ್ಯಾಂಕ್ ಉದ್ಯೋಗಿ ಮಂಜುನಾಥ್ ಅವರ ನಿವೃತ್ತಿ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ವಿವಿಧ ಗಣ್ಯರು, ಸಹೋದ್ಯೋಗಿಗಳು ಹಾಗೂ ಅಭಿಮಾನಿಗಳು ಭಾಗವಹಿಸಿ, ಮಂಜು ಅವರ ಸೇವೆಯನ್ನು ಕೊಂಡಾಡಿದರು.



ಬೇಲೂರು ಎಸ್‌ಬಿಐ ಬ್ಯಾಂಕ್ ಶಾಖೆಯ ಕ್ಯಾಷಿಯರ್ ಮಂಜುನಾಥ್ ನಿವೃತ್ತಿ ಹೊಂದಿದ್ದು ಡಾ. ರಾಜ್‌ಕುಮಾರ್ ಅಭಿಮಾನಿಗಳ ಸಂಘದಿಂದ ಸನ್ಮಾನಿಸಿ ಬೀಳ್ಕೊಡಲಾಯಿತು.

ಪಟ್ಟಣದ ದೇವಸ್ಥಾನ ಬೀದಿಯಲ್ಲಿರುವ ಎಸ್ ಬಿಐ ಬ್ಯಾಂಕಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಾ. ರಾಜ್ ಕುಮಾರ್‌ಅಭಿಮಾನಿ ಸಂಘದ ಅಧ್ಯಕ್ಷ ತೀರ್ಥಂಕರ್‌ಮಾತನಾಡಿ, ಮಂಜು ಅವರೊಂದಿಗಿನ ನಮ್ಮ ಬಾಂಧವ್ಯ ಆತ್ಮೀಯವಾಗಿತ್ತು. ಅವರು ನಿವೃತ್ತರಾಗುತ್ತಿರುವುದು ಒಂದು ಕಡೆ ಬೇಸರ ತಂದರೂ, ಮುಂದಿನ ದಿನಗಳಲ್ಲಿ ಅವರು ಡಾ. ರಾಜ್ ಕುಮಾರ್‌ಸಂಘದ ಚಟುವಟಿಕೆಗಳಲ್ಲಿ ಪೂರ್ಣ ಪ್ರಮಾಣದಲ್ಲಿ ತೊಡಗಿಸಿಕೊಳ್ಳಲಿದ್ದಾರೆ, ಅವರ ಮುಂದಿನ ಜೀವನ ಸುಖಮಯವಾಗಿರಲಿ ಎಂದು ಶುಭ ಹಾರೈಸಿದರು.

ಎಸ್‌ಬಿಐ ಬ್ಯಾಂಕ್ ಸಹಾಯಕ ವ್ಯವಸ್ಥಾಪಕ ಸಂತೋಷ್ ಮಾತನಾಡಿ, ನಮ್ಮ ಬ್ಯಾಂಕಿನಲ್ಲಿ ಬಹುತೇಕ ನಾವೆಲ್ಲರೂ ಜೂನಿಯರ್‌ಗಳೇ. ಮಂಜಣ್ಣ ನಮ್ಮೆಲ್ಲರಿಗೂ ಹಿರಿಯರು ಹಾಗೂ ಮಾರ್ಗದರ್ಶಕರು. ನನ್ನ ಆರು ವರ್ಷದ ಬ್ಯಾಂಕಿಂಗ್ ಅನುಭವದಲ್ಲಿ ಅವರಷ್ಟು ಮೃದು ಸ್ವಭಾವದ ಅಧಿಕಾರಿಯನ್ನು ನೋಡಿಲ್ಲ, ಅವರ ನೇರ ನುಡಿ ಮತ್ತು ಪ್ರಾಮಾಣಿಕತೆ ನಮಗೆಲ್ಲರಿಗೂ ಪಾಠವಾಗಿದೆ. ಅವರು ಯಾವುದೇ ಕಪ್ಪು ಚುಕ್ಕೆ ಇಲ್ಲದೆ ತಮ್ಮ ಸೇವೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ ಎಂದು ಹೇಳಿದರು.

ಉದ್ಯಮಿ ಸಂತೋಷ್ ಮಾತನಾಡಿ, ಎಸ್.ಬಿ.ಎಂ ಕಾಲದಿಂದಲೇ ನಮ್ಮ ಎಲ್ಲಾ ಅಕೌಂಟ್‌ಗಳು ಈ ಬ್ಯಾಂಕ್‌ನಲ್ಲೇ ಇವೆ. ನಮಗೆ ಏನೇ ಕೆಲಸ ಇದ್ದರೂ ಮಂಜಣ್ಣನಿಗೆ ಹೇಳಿದರೆ ಸಾಕು, ಅವರು ಸ್ಪಂದಿಸುತ್ತಿದ್ದರು. ಯಾವುದೇ ಕಪ್ಪು ಚುಕ್ಕೆ ಇಲ್ಲದೆ ಅವರು ನಿವೃತ್ತಿಯಾಗುತ್ತಿರುವುದು ಹೆಮ್ಮೆಯ ವಿಷಯ. ನಿವೃತ್ತಿಯಾದ ಬಳಿಕವೂ ಅವರು ಸಮಾಜದೊಂದಿಗೆ ಹೀಗೆ ಕ್ರಿಯಾಶೀಲರಾಗಿರಲಿ ಎಂದು ಆಶಿಸಿದರು. ನಿವೃತ್ತ ಮಂಜುನಾಥ್ ಅವರಿಗೆ ಸನ್ಮಾನಿಸಿ ಅಭಿನಂದಿಸಲಾಯಿತು. ಪಣೀಂದ್ರ ,ಅಡುಗೆರವಿ, ಸುಬ್ಬಣ್ಣ, ವಿಜಯಲಕ್ಷ್ಮೀ, ಪುರಸಭೆ ಸದಸ್ಯ ಗಿರೀಶ್, ಆದಿತ್ಯ, ಎಸ್ ಬಿಐ ಮ್ಯಾನೇಜರ್ ಆದಿತ್ಯ , ಪುರಸಭಾ ಸದಸ್ಯ ಜಗದೀಶ್, ಬ್ಯಾಂಕಿನ ಸಿಬ್ಬಂದಿ ಲಕ್ಷ್ಮೀ, ತಶಾಂಗಿ , ಜಯರಾಮ್, ಮುನ್ನ ಇತರರು ಹಾಜರಿದ್ದರು.

ದ್ವಿತೀಯ ಪಿಯು ಪರೀಕ್ಷೆಯ ಮರು ಮೌಲ್ಯಮಾಪನದಲ್ಲಿ ಸಜಿನಿ ಪ್ರಥಮ



ವಿದ್ಯಾರ್ಥಿನಿ ಸಜನಿಯನ್ನು ಕಾಲೇಜು ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಚನ್ನರಾಯಪಟ್ಟಣ: ನ್ಯೂ ಅಲಯನ್ಸ್ ಕಾಮರ್ಸ್ ಕಾಲೇಜಿನ ವಿದ್ಯಾರ್ಥಿನಿಯಾದ ಬಿ.ಎನ್. ಸಜಿನಿ ಅವರು 2025- 26ನೇ ಸಾಲಿನ ಕರ್ನಾಟಕ ರಾಜ್ಯ ದ್ವಿತೀಯ ಪಿಯುಸಿ ಪರೀಕ್ಷೆಯ (ಮರುಮೌಲ್ಯಮಾಪನದ ನಂತರ) ಫಲಿತಾಂಶದಲ್ಲಿ 600ಕ್ಕೆ 594 ಅಂಕಗಳನ್ನು ಪಡೆಯುವ ಮೂಲಕ ಐತಿಹಾಸಿಕ ಸಾಧನೆ ಮಾಡಿದ್ದಾರೆ. ಇವರು ಚನ್ನರಾಯಪಟ್ಟಣ ತಾಲೂಕಿನ ಇತಿಹಾಸದಲ್ಲೇ ಪ್ರಪ್ರಥಮ ಬಾರಿಗೆ ವಾಣಿಜ್ಯ ವಿಭಾಗದಲ್ಲಿ ಅತೀ ಹೆಚ್ಚು ಅಂಕಗಳನ್ನು ಪಡೆದು ಹೊಸ ದಾಖಲೆಯನ್ನು ನಿರ್ಮಿಸಿದ್ದಾರೆ. ಇದರ ಜೊತೆಗೆ ರಾಜ್ಯ ಮಟ್ಟದಲ್ಲಿ 7ನೇ ರ್‍ಯಾಂಕ್ ಮತ್ತು ತಾಲೂಕು ಮಟ್ಟದಲ್ಲಿ ಪ್ರಥಮ ರ್‍ಯಾಂಕ್ ಗಳಿಸಿದ್ದಾರೆ. ಇವರು ಕನ್ನಡ - 99, ಇಂಗ್ಲಿಷ್ - 95, ಇಕಾನಾಮಿಕ್ಸ್ - 100, ಅಕೌಂಟೆನ್ಸಿ - 100. ಸ್ಟ್ಯಾಟಿಸ್ಟಿಕ್ಸ್ - 100, ಬಿಸಿನೆಸ್ ಸ್ಟಡೀಸ್ - 100 ಸೇರಿ ಒಟ್ಟು - 600ಕ್ಕೆ 594 ಅಂಕಗಳನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಈ ಸಾಧನೆಯನ್ನು ಗುರುತಿಸಿ ಕಾಲೇಜು ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾಲೇಜಿನ ಪ್ರಾಂಶುಪಾಲರಾದ ಲೋಹಿತ್ ಉಪಪ್ರಾಂಶುಪಾಲರಾದ ಉಲ್ಲಾಸ್, ಉಪನ್ಯಾಸಕರಾದ ಶಿಲ್ಪಾ ಎಚ್. ಟಿ, ಪ್ರಸನ್ನಕುಮಾರ್‌ಎ. ಸಿ., ಜಹಾರ ಬೇಗಮ್, ಉಲ್ಲಾಸ್ ಎಚ್. ವಿ., ಉಲ್ಲಾಸ್ ಎಚ್. ವಿ., ಬಿಂದು ಪಿ. ಎಂ., ಯೋಗತರಬೇತಿದಾರರಾದ ರೇಖಾರಾಣಿ ,ವಿದ್ಯಾರ್ಥಿಗಳು ಹಾಜರಿದ್ದರು.

6ರಂದು ಟಾಪರ್ ವಿದ್ಯಾರ್ಥಿಗಳಿಗೆ ಅಭಿನಂದನೆ

ಹಾಸನ: ಜಿಲ್ಲೆಯಲ್ಲಿ 2026ರಲ್ಲಿ ನಡೆದ ಎಸ್ ಎಸ್ ಎಲ್ ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಸಾಧನೆಗೈದ ಸರ್ಕಾರಿ, ಅನುದಾನಿತ ಶಾಲೆಗಳ ವಿದ್ಯಾರ್ಥಿಗಳು ಹಾಗೂ ನಿರಂತರವಾಗಿ ಕಳೆದ 3 ವರ್ಷಗಳಿಂದ ಪರೀಕ್ಷೆಯಲ್ಲಿ ಶೇಕಡ100ರಷ್ಟು ಫಲಿತಾಂಶ ಪಡೆದಿರುವ ಶಾಲೆಗಳಿಗೆ ಅಭಿನಂದಿಸಲು ಅಗತ್ಯ ಸಿದ್ಧತೆಗೆ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಭಾನುವಾರ ಕಾರ್ಯಕ್ರಮ ಕುರಿತು ಪೂರ್ವಭಾವಿ ಸಭೆ ನಡೆಸಿ ಮಾತನಾಡಿ, ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಭೈರೇಗೌಡ ಅವರ ನೇತೃತ್ವದಲ್ಲಿ ಎಲ್ಲಾ ಜನಪ್ರತಿನಿಧಿಗಳ ಸಹಭಾಗಿತ್ವದಲ್ಲಿ ಮೇ.6 ರಂದು ಹಾಸನಾಂಬಾ ಕಲಾಭವನದಲ್ಲಿ ಕಾರ್ಯಕ್ರಮ ಅಚ್ಚುಕಟ್ಟಾಗಿ ಹಾಗೂ ಅರ್ಥಪೂರ್ಣವಾಗಿ ಮೂಡಿಬರಲು ಕ್ರಮವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಪ್ರತಿ ತಾಲೂಕಿನಿಂದ ಸರ್ಕಾರಿ ಶಾಲೆಯ 3 ವಿದ್ಯಾರ್ಥಿಗಳು ಹಾಗೂ ಅನುದಾನಿತ ಶಾಲೆಯ 2 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 5 ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವಂತೆ ತಿಳಿಸಿ, ಆರ್.ಟಿ.ಇ ಮೂಲಕ ಖಾಸಗಿ ಶಾಲೆಗಳಲ್ಲಿ ಪ್ರವೇಶ ಪಡೆದು ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ಪ್ರತಿ ತಾಲೂಕಿಗೆ ಒಬ್ಬರಂತೆ 8 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ಸೂಚಿಸಿದರು. ಬಿ.ಸಿ.ಎಂ, ಸಮಾಜ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಗಳ ವಿದ್ಯಾರ್ಥಿಗಳಲ್ಲಿ ತಲಾ ಒಬ್ಬರನ್ನು ಆಯ್ಕೆ ಮಾಡುವಂತೆ ತಿಳಿಸಿ , ಬಾಲಮಂದಿರದಲ್ಲಿ ಉತ್ತಮ ಸಾಧನೆಗೈದ ತಲಾ ಒಬ್ಬರನ್ನು ಆಯ್ಕೆ ಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಸಾಧಕ ವಿದ್ಯಾರ್ಥಿಗಳು, ಶಿಕ್ಷಕರಿಗೆ ಅಭಿನಂದನೆ

ಬೇಲೂರು: ಎಸ್‌ಎಸ್‌ಎಲ್‌ಸಿ , ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿಧಾನಸಭಾ ಕ್ಷೇತ್ರದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ಜೊತೆಗೆ ಎಸ್‌ಎಸ್‌ಎಲ್ ಸಿಯಲ್ಲಿ ಶೇ.100ರಷ್ಟು ಫಲಿತಾಂಶ ನೀಡಿದ ಶಾಲೆಗಳ ಮುಖ್ಯೋಪಾಧ್ಯಾಯರನ್ನು ಗೌರವಿಸಲಾಯಿತು.

ಪಟ್ಟಣದ ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಾಸಕ ಎಚ್.ಕೆ. ಸುರೇಶ್ ಮಾತನಾಡಿ, ಶಿಕ್ಷಣವು ಯಾರಿಂದಲೂ ಕಸಿದುಕೊಳ್ಳಲಾಗದ ಸಂಪತ್ತಾಗಿದ್ದು, ಜೀವನದಲ್ಲಿ ಉನ್ನತ ಗುರಿ ಸಾಧಿಸಲು ಇದು ಪ್ರಮುಖ ಸಾಧನ. ಶಿಕ್ಷಣವು ಕೇವಲ ಅಕ್ಷರ ಜ್ಞಾನವಲ್ಲ, ಸಂಸ್ಕಾರವಂತ ಸಮಾಜ ನಿರ್ಮಾಣಕ್ಕೆ ದಾರಿ ತೋರುವ ಶಕ್ತಿ. ವಿದ್ಯಾರ್ಥಿಗಳ ಸಾಧನೆಗೆ ಶಿಕ್ಷಕರ ಪರಿಶ್ರಮವೇ ಪ್ರಮುಖ ಕಾರಣವಾಗಿದ್ದು, ವಿದ್ಯಾರ್ಥಿ- ಶಿಕ್ಷಕ- ಪೋಷಕರು- ಶೈಕ್ಷಣಿಕ ಸಂಸ್ಥೆ ಎಂಬ ನಾಲ್ಕು ಸ್ತಂಭಗಳು ಒಟ್ಟಾಗಿ ಸೇರಿದಾಗಲೇ ಯಶಸ್ಸು ಸಾಧ್ಯವಾಗುತ್ತದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಭಾಗ್ಯಮ್ಮ , ಉಪನ್ಯಾಸಕ ಪೂರ್ಣಚಂದ್ರ ಮಾತನಾಡಿ, ಸಾಮಾನ್ಯ ಕುಟುಂಬದ ವಿದ್ಯಾರ್ಥಿಗಳು ದೊಡ್ಡ ಸಾಧನೆ ಮಾಡಲು ಶಿಕ್ಷಣವೇ ಪ್ರಮುಖ ಎಂದು ತಿಳಿಸಿ, ಶಾಸಕ ಸುರೇಶ್ ಅವರ ಪ್ರಾಮಾಣಿಕತೆ ಹಾಗೂ ಭ್ರಷ್ಟಾಚಾರದ ವಿರುದ್ಧದ ನಿಲುವನ್ನು ಕೊಂಡಾಡಿದರು. ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿ ಸುಮಾರು 50 ವಿದ್ಯಾರ್ಥಿಗಳಿಗೆ ಅಭಿನಂದಿಸಲಾಯಿತು.

ಸರ್ಕಾರಿ ಪದವಿ ಪೂರ್ವ ಕಾಲೇಜಿನ ವೀಣಾ, ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷೆ ಶೋಭ ಗಣೇಶ್, ನವೀನ್ ಕುಮಾರ್,ಧನಂಜಯ್, ಕರಿಬಸಪ್ಪ ಬಿ. ಇತರರು ಇದ್ದರು.



ಶೇ.100 ಫಲಿತಾಂಶ ನೀಡಿದ ಶಿಕ್ಷಕರು , ವಿದ್ಯಾರ್ಥಿಗಳಿಗೆ ಗೌರವಿಸಿ ಸನ್ಮಾನಿಸಲಾಯಿತು.

ಶ್ರೇಷ್ಠರ ಸ್ಮರಣೆ | ಸಂಗೀತ ಕಲಾ ಸೇವಾ ಟ್ರಸ್ಟ್ ಅಧ್ಯಕ್ಷ ನರಸಿಂಹಸ್ವಾಮಿ | ಬೇಲೂರಲ್ಲಿ ಆರಾಧನೋತ್ಸವ

ಕರ್ನಾಟಕ ಸಂಗೀತ ಉಳಿವಿಗೆ ದಾಸ ಶ್ರೇಷ್ಠರ ಪರಿಶ್ರಮ ಕಾರಣ

• **ಕನ್ನಡಪ್ರಭ ವಾರ್ತೆ,** ಬೇಲೂರು

ಕರ್ನಾಟಕ ಸಂಗೀತವು ಇಂದು ಇಡೀ ವಿಶ್ವದಲ್ಲೇ ಅತ್ಯಂತ ಶ್ರೀಮಂತ ಶಾಸ್ತ್ರೀಯ ಸಂಗೀತ ಪದ್ಧತಿಯಾಗಿ ಗುರುತಿಸಿಕೊಂಡಿದ್ದರೆ, ಅದಕ್ಕೆ ದಾಸ ಶ್ರೇಷ್ಠರು ಹಾಕಿಕೊಟ್ಟ ಭದ್ರ ಬುನಾದಿಯೇ ಕಾರಣ ಎಂದು ಲಕ್ಷ್ಮೀ ಮಂಗಳವಾದ್ಯ ಮತ್ತು ಸಂಗೀತ ಕಲಾ ಸೇವಾ ಟ್ರಸ್ಟ್ ಅಧ್ಯಕ್ಷ ನರಸಿಂಹಸ್ವಾಮಿ ಹೇಳಿದರು.

ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಶ್ರೀ ಲಕ್ಷ್ಮೀ ಮಂಗಳವಾದ್ಯ ಮತ್ತು ಸಂಗೀತ ಕಲಾ ಸೇವಾ ಟ್ರಸ್ಟ್ ವತಿಯಿಂದ ಜರುಗಿದ ಶ್ರೇಷ್ಠ ದಾಸರಾದ ಶ್ರೀ ತ್ಯಾಗರಾಜರು, ಪುರಂದರದಾಸರು, ಕನಕದಾಸರು ಮತ್ತು ಬೇಲೂರು ವೈಕುಂಠದಾಸರ ಆರಾಧನೆ ಕಾರ್ಯಕ್ರಮದಲ್ಲಿ ಮಾತನಾಡಿ, ಪ್ರತಿವರ್ಷದಂತೆ ಈ ವರ್ಷವೂ ಕೂಡ ಶ್ರೇಷ್ಠ ದಾಸರ ಆರಾಧನಾ ಮಹೋತ್ಸವವನ್ನು ಆಚರಿಸಲಾಗುತ್ತಿದೆ.



ದಾಸ ಸಾಹಿತ್ಯವಿಲ್ಲದ ಕರ್ನಾಟಕ ಸಂಗೀತವನ್ನು ಕಲ್ಪಿಸಿಕೊಳ್ಳುವುದು ಅಸಾಧ್ಯ. ದಾಸರು ಹಾಕಿಕೊಟ್ಟ ದಾರಿಯಲ್ಲಿಯೇ ಇಂದು ದೊಡ್ಡ ದೊಡ್ಡ ವಿದ್ವಾಂಸರು ಸಾಗುತ್ತಿದ್ದಾರೆ, ಮೂಲ ದಾಸರುಗಳು ರಚಿಸಿದ ಕೀರ್ತನೆಗಳು, ದೇವರನಾಮಗಳನ್ನು ಕೇಳುವುದರಿಂದ ಮನಸ್ಸಿಗೆ ಸಂತೋಷ ಲಭಿಸುತ್ತದೆ ಎಂದರು.

ದಾಸರ ಕೀರ್ತನೆಗಳಾಗಲಿ ಅಥವಾ ಶಾಸ್ತ್ರೀಯ ರಾಗಗಳಾಗಲಿ, ಅವುಗಳನ್ನು ಸಿದ್ಧಿಸಿಕೊಳ್ಳಲು ವರ್ಷಾನುಗಟ್ಟಲೆ ಕಠಿಣ ಅಭ್ಯಾಸ ಬೇಕು. ಇಂದಿನ ಪೀಳಿಗೆಗೆ 'ರೀಲ್ಸ್' ಅಥವಾ 'ಫಾಸ್ಟ್ ಮ್ಯೂಸಿಕ್' ನಂತಹ ತಕ್ಷಣಕ್ಕೆ ಕಿವಿಗಿಂಪು ನೀಡುವ ಸಂಗೀತ ಇಷ್ಟವಾಗುತ್ತಿದೆ. ಆದರೆ ಶಾಸ್ತ್ರೀಯ ಸಂಗೀತವನ್ನು ಅರ್ಥಮಾಡಿಕೊಳ್ಳಲು ಮತ್ತು ಆಸ್ವಾದಿಸಲು ತಾಳ್ಮೆ ಹಾಗೂ ಸಮಯ ಬೇಕು. ಮುಂದಿನ ಯುವ ಪೀಳಿಗೆಗೆ ಸಹಕಾರಿಯಾಗಬೇಕೆಂದರೆ ತಾಲೂಕಿನಲ್ಲಿ ಹಲವಾರು ಸಂಗೀತ ಕಾರ್ಯಕ್ರಮಗಳು ಆಯೋಜನೆ ಆಗಬೇಕಿದೆ. ಇಲ್ಲಿ ಕೂಡ ಹಲವಾರು ಅತ್ಯುತ್ತಮ ಕಲಾವಿದರಿದ್ದಾರೆ, ಅಂತಹ ಕಲಾವಿದರಿಗೆ ಒಂದು ವೇದಿಕೆ ರೂಪುಗೊಳ್ಳಬೇಕಿದೆ. ಸಂಗೀತ ಕ್ಷೇತ್ರಕ್ಕೆ ಸಂಬಂಧಪಟ್ಟ ಕಾರ್ಯಕ್ರಮಗಳನ್ನು ಟ್ರಸ್ಟ್ ವತಿಯಿಂದ ಆಯೋಜಿಸುವ ಯೋಜನೆ ಇದೆ ಎಂದರು.

ಕೆಡಿಪಿ ಸದಸ್ಯರಾದ ಸೌಮ್ಯಾ ಆನಂದ್ ಮಾತನಾಡಿ, ನಮ್ಮ ತಂದೆ ಕಾಲದಿಂದಲೂ ಇಂತಹ ಕಾರ್ಯಕ್ರಮಗಳಿಗೆ ಉತ್ತೇಜನ ನೀಡುತ್ತಾ ಬಂದಿದ್ದರು, ಶಾಸ್ತ್ರೀಯ ಸಂಗೀತ ಕ್ಷೇತ್ರಕ್ಕೆ ಯುವಕರನ್ನು ಸೆಳೆಯುವ ಇಂತಹ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿರುವುದು ಶ್ಲಾಘನೀಯ ಎಂದರು,

ಶ್ರೀ ಮಠದ ವ್ಯವಸ್ಥಾಪಕರಾದ ಸುಧೀಂದ್ರ ಮಾತನಾಡಿ, ಮನೆಗಳಲ್ಲಿ ಮಕ್ಕಳಿಗೆ ಬಾಲ್ಯದಿಂದಲೇ ದಾಸರ ಪದಗಳನ್ನು ಅಥವಾ ಸರಳವಾದ ಶಾಸ್ತ್ರೀಯ ಸಂಗೀತವನ್ನು ಕೇಳಿಸುವ ಅಭ್ಯಾಸ ಮಾಡಬೇಕು. ಸಂಗೀತ ಕಚೇರಿಗಳಿಗೆ ಮಕ್ಕಳನ್ನು ಕರೆದೊಯ್ದು, ಅದರ ಗಾಂಭೀರ್ಯ ಅವರಿಗೆ ಪರಿಚಯಿಸಬೇಕು ಎಂದರು. ತಾಲೂಕಿನ ಕಲಾವಿದರುಗಳಾದ ಹರೀಶ್ ಮತ್ತು ಗಾಯತ್ರಿ ರವರನ್ನು ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಟ್ರಸ್ಟ್ ನ ನಿರ್ದೇಶಕರಾದ ವಿಷ್ಣು ಪ್ರಸಾದ್, ಜಿಲ್ಲಾ ಕೆಡಿಪಿ ಸದಸ್ಯರಾದ ಸೌಮ್ಯಾ ಆನಂದ್, ಶ್ರೀ ಮಠದ ಸುಧೀಂದ್ರ, ಲೋಕೇಶ್, ಸವಿತಾ ಸಮಾಜದ ಚಂದ್ರು, ನಟರಾಜ್, ಕಲಾವಿದರಾದ ಚೂಡಾಮಣಿ , ಸಂಜೀವ, ಶ್ರೇಯಾ, ನಂದೀಶ ಉಪಸ್ಥಿತರಿದ್ದರು.